MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 27 | ಬುಧವಾರ : 12–11–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 05 | ISSUE: 27 | WEDNESDAY : 12–11–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ವೀರವನಿತೆ ಒನಕೆ ಓಬವ್ವನ ಧೈರ್ಯ, ಸಾಹಸ ಮಹಿಳೆಯರಿಗೆ ಸ್ಫೂರ್ತಿ: ಜಿಲ್ಲಾಧಿಕಾರಿ ನಿತೀಶ್ ಕೆ.





ಯುವ ಮಾರ್ಗ ಸುದ್ದಿ

**ರಾಯಚೂರು,ನ.11–** ವೀರವನಿತೆ ಒನಕೆ ಓಬವ್ವನ ಸಮಯ ಪ್ರಜ್ಞೆ, ಧೈರ್ಯ ಮತ್ತು ಸಾಹಸಗಳು ಹೆಣ್ಣು ಮಕ್ಕಳಿಗೆ ಸ್ಫೂರ್ತಿದಾಯಕವಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನವೆಂಬರ್ 11ರಂದು ನಡೆದ ವೀರರಾಣಿ ಒನಕೆ ಓಬವ್ವನ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎದುರಾಳಿ ಸೈನಿಕರು ಕೋಟೆಯನ್ನು ಮುತ್ತಿದಾಗ, ಮನೆಯಲ್ಲಿನ ಒನಕೆಯನ್ನೇ ಆಯುಧವಾಗಿ ಬಳಸಿ ನೂರಾರು ಸೈನಿಕರ ರುಂಡಗಳನ್ನು ಚೆಂಡಾಡಿ, ಕೋಟೆಯನ್ನು ರಕ್ಷಿಸಿ ವೀರನಾರಿ ಎನ್ನುವ ಬಿರುದು ಪಡೆದುಕೊಂಡರು. ಇಂತಹ ವೀರನಾರಿಯ ಚರಿತ್ರೆಯನ್ನು ಎಲ್ಲೆಡೆ ಪಸರಿಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕು. ವಿದ್ಯಾರ್ಥಿಗಳು ವೀರ ನಾರಿ ಒನಕೆ ಓಬವ್ವನ ಧೈರ್ಯ ಸಾಹಸವನ್ನು ಮೈಗೂಡಿಸಿಕೊಳ್ಳಬೇಕು.

ರಾಯಚೂರು ಜಿಲ್ಲೆ ಅಭಿವೃದ್ಧಿಪಥದಲ್ಲಿದೆ. ಮೈಸೂರು, ಬೆಳಗಾವಿ ಜಿಲ್ಲೆಗಳಲ್ಲಿ ಆಗಿರುವಂತಹ ಬದಲಾವಣೆಗಳು ನಮ್ಮಲ್ಲೂ ಆಗಬೇಕು. ಅಪೌಷ್ಟಿಕತೆಯನ್ನು ಹೋಗಲಾಡಿಸಬೇಕು. ಪೂರ್ಣ ಪ್ರಮಾಣದ ಶಿಕ್ಷಣದ ಕೊರತೆ ತಪ್ಪಬೇಕು. ತಾಯಿ ಮತ್ತು ಮಕ್ಕಳು ಎದುರಿಸುತ್ತಿರುವ ರಕ್ತ ಹೀನತೆಯಂತಹ ಸಮಸ್ಯೆಗಳು ತೊಲಗಬೇಕು. ಅನೇಕ ಪ್ರಗತಿದಾಯಕ ಕಾರ್ಯಕ್ರಮ ರೂಪಿಸುತ್ತಿರುವ ಜಿಲ್ಲಾಡಳಿತಕ್ಕೆ ಜನತೆ ಸಹಕಾರ ನೀಡಬೇಕೆಂದು ಹೇಳಿದರು.

ಈ ಭಾಗದ ವಿದ್ಯಾರ್ಥಿಗಳು ಅಧ್ಯಯನಶೀಲರಾಗಬೇಕು. ಐಎಎಸ್, ಐಪಿಎಸ್‌ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉನ್ನತ ಹುದ್ದೆಗಳಿಗೇರಬೇಕು. ಈ ಭಾಗದಲ್ಲಿ ಮಹಿಳಾ ಅಧಿಕಾರಿಗಳ ಸಂಖ್ಯೆ ಕಡಿಮೆ ಇದ್ದು, ವಿದ್ಯಾರ್ಥಿನಿಯರು ಓದಿನಲ್ಲಿ ಮುಂದೆ ಬರಬೇಕು. ಹಾಸ್ಟೇಲ್ ಸೌಕರ್ಯ ಪಡೆದುಕೊಂಡು **(2ನೇ ಪುಟಕ್ಕೆ)**

## ಉಗ್ರರ ದಾಳಿಯ ಪ್ರತೀಕಾರಕ್ಕೆ ಸಜ್ಜಾದ ಸೇನೆ..?



**ನವದೆಹಲಿ,ನ.11–** ಈ ಹಿಂದೆ ಪುಲ್ವಾಮದಲ್ಲಿ ಸಂಭವಿಸಿದ ಉಗ್ರರ ದಾಳಿಗೆ ಪ್ರತಿಕಾರವಾಗಿ ಪಾಕಿಸ್ತಾನ ಹಾಗೂ ಪಿಒಕೆಯಲ್ಲಿ ಭಾರತದ ಸೇನಾಪಡೆ ನಡೆಸಿದ ಆಪರೇಷನ್ ಸಿಂಧೂರ್ ಮಾದರಿಯಲ್ಲೆ? ಮತ್ತೊಂದು ಕಾರ್ಯಾಚರಣೆಗೆ ಸೇನಾಪಡೆಗಳು ಸಜ್ಜಾಗಿವೆ. ಸೋಮವಾರ ಸಂಜೆ ದೆಹಲಿಯ ಪ್ರತಿಷ್ಠಿತ ಕೆಂಪುಕೋಟೆ ಬಳಿ ಕಾರ್ ಬಾಂಬ್ ಸ್ಫೋಟ ಸಂಭವಿಸಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಕೇಂದ್ರ ಸರ್ಕಾರ ಉಗ್ರರ ಹೆಡೆಮುರಿ ಕಟ್ಟಲು ಪಣತೊಟ್ಟಿದೆ.

ಸಂಜೆ ಪ್ರಧಾನಿ ನರೇಂದ್ರಮೋದಿ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ. ಸಭೆಗೆ ಮೂರು ಸೇನಾಪಡೆಗಳ ಮುಖ್ಯಸ್ಥರು, ರಾಷ್ಟ್ರೀಯ ಭದ್ರತಾ ಸಲಹೆಗಾರ, ಗುಪ್ತಚರ ವಿಭಾಗ ಸೇರಿದಂತೆ ಎಲ್ಲಾ ಹಿರಿಯ ಅಧಿಕಾರಿಗಳ ಸಭೆ ಕರೆಯಲಾಗಿದೆ.

ಪ್ರಕರಣ ಕುರಿತಂತೆ ಕೂಲಂಕುಷವಾಗಿ ಮಾಹಿತಿ ಪಡೆಯಲಿರುವ ಪ್ರಧಾನಿ ನರೇಂದ್ರಮೋದಿ ಅವರು ಮುಂದೆ ಕೈಗೊಳ್ಳಬೇಕಾದ ಕಾರ್ಯಾಚರಣೆ ಕುರಿತು ಮಾಹಿತಿ ಪಡೆಯಲಿದ್ದಾರೆ.

ಈ ದಾಳಿಯ ಹಿಂದೆ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ ಜೈಷ್–ಎ–ಮೊಹಮದ್ ಕೈವಾಡವಿದೆ ಎಂದು ತನಿಖಾ ಸಂಸ್ಥೆಗಳು ಶಂಕೆ ವ್ಯಕ್ತಪಡಿಸಿದೆ. ಆದರೆ ಈ ಕೃತ್ಯ ವೈದ್ಯಕೀಯ**(2ನೇಪುಟಕ್ಕೆ)**

## ತುರವಿಹಾಳ ಸರ್ಕಾರಿ ಆಸ್ಪತ್ರೆಯ ಡಯಾಲಿಸೀಸ್ ಘಟಕಕ್ಕೆ ಶಾಸಕ ಆರ್.ಬಸನಗೌಡ ತುರವಿಹಾಳ ಭೇಟಿ



ಯುವ ಮಾರ್ಗ ಸುದ್ದಿ

**ರಾಯಚೂರು,ನ.11–** ಸಿಂಧನೂರ ತಾಲೂಕಿನ ತುರವಿಹಾಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಈಗಾಗಲೇ ಆರಂಭಿಸಿರುವ ಸುಸಜ್ಜಿತ ಡಯಾಲಿಸೀಸ್ ಘಟಕಕ್ಕೆ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ ಅವರು ನವೆಂಬರ್ 11ರಂದು ಭೇಟಿ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಮೂತ್ರಪಿಂಡದ ಗಂಭೀರ ಸಮಸ್ಯೆಯಿಂದ ಬಳಲುವವರಿಗೆ ಅನುಕೂಲವಾಗಲು ತುರವಿಹಾಳ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಘಟಕ ಆರಂಭಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಆಸ್ಪತ್ರೆಯಲ್ಲಿ ಈಗಾಗಲೆ 4 ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದು, ಈ ಮೊದಲು ಮೂತ್ರಪಿಂಡದ ತೊಂದರೆಯಿಂದ ಡಯಾಲಿಸೀಸ್ ಮಾಡಿಸಲು ಸಿಂಧನೂರುಗೆ ತೆರಳಿ ಚಿಕಿತ್ಸೆ ಪಡೆಯುವುದನ್ನು ಮನಗಂಡು ಜನತೆಗೆ ಉಂಟಾಗುವ ಆರ್ಥಿಕ ತೊಂದರೆ, ಸಮಯವನ್ನು ಉಳಿಸಲು ತುರ್ವಿಹಾಳದಲ್ಲಿಯೇ ಆರಂಭಿಸಿರುವುದರಿಂದ ಇದರ ಪ್ರಯೋಜನವನ್ನು ಸುತ್ತಲಿನ 36 ಗ್ರಾಮಗಳು ಹಾಗೂ 14 ಹಟ್ಟಿಗಳನ್ನೊಳಗೊಂಡಂತೆ ಎಲ್ಲ ಸಾರ್ವಜನಿಕರು ಪಡೆದುಕೊಳ್ಳುವಂತೆ ಕೋರಿದರು.

ಗ್ರಾಮೀಣ ಭಾಗದಲ್ಲಿ ಎಲ್ಲ ವರ್ಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ಸದುದ್ದೇಶದಿಂದ ರಾಜ್ಯ ಸರಕಾರವು ಸಮುದಾಯ ಆರೋಗ್ಯ ಕೇಂದ್ರಗಳಿಗೂ ಸಹ ಸುಸಜ್ಜಿತ ಉಪಕರಣಗಳು, ತಜ್ಞ ವೈದ್ಯರ ಸೇವೆ ನೀಡುತ್ತಿದೆ.

ಆಸ್ಪತ್ರೆಗೆ ಬೇಕಾಗುವ ಪರಿಕರಗಳನ್ನು ಸರಕಾರದಿಂದ ಒದಗಿಸುವುದಾಗಿ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಸೂತಿ ತಜ್ಞರ, ಮಕ್ಕಳ ತಜ್ಞರ ಸೇವೆಯನ್ನು ಪಡೆಯಲು ಹಾಗೂ ಹೆರಿಗೆಗೆ ಬೇರಡೆ **(2ನೇ ಪುಟಕ್ಕೆ)**

## ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್ ಸ್ಮರಣಾರ್ಥ ರಾಷ್ಟ್ರೀಯ ಶಿಕ್ಷಣ ದಿನಾಚರಣೆ

## ಕಲಿಕೆಯೇ ಶಿಕ್ಷಣದ ಮಹತ್ ಕಾರ್ಯ: ಪ್ರವೀಣ್ ಕುಮಾರ್

ಯುವ ಮಾರ್ಗ ಸುದ್ದಿ





**ರಾಯಚೂರು,ನ.11–** ಶಿಕ್ಷಣ ಎಂದರೆ ಕೇವಲ ಓದುವುದಲ್ಲ. ಇತರರಿಂದ ಕಲಿಯುವುದು ಮತ್ತು ಇತರರಿಗೆ ಕಲಿಸುವುದು ಸಹ ಶಿಕ್ಷಣದ ಮಹತ್ವದ ಕಾರ್ಯವಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್ ಅವರು ಹೇಳಿದರು.

ನಗರದ ಚಂದ್ರಬಂಡ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನವೆಂಬರ್ 11ರಂದು ನಡೆದ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರ ಅವರಿಗೆ ಮರಣೋತ್ತರವಾಗಿ ಭಾರತ ರತ್ನ ನೀಡಿ ಗೌರವಿಸಿತು. ವಿದ್ಯಾರ್ಥಿಗಳು ಮಾತ್ರವಲ್ಲದೇ ದೇಶದ ಪ್ರತಿಯೊಬ್ಬ ಪ್ರಜೆಯೂ ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರ ಕೊಡುಗೆಯನ್ನು ನೆನೆಯಬೇಕು. ರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸುವ ಮುಖ್ಯ ಉದ್ದೇಶ ಭಾರತದ ಮೊದಲ ಶಿಕ್ಷಣ ಸಚಿವರು ಭಾರತದ ಶಿಕ್ಷಣಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವುದಾಗಿದೆ ಎಂದರು.

ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಶಿಕ್ಷಣ ಸಚಿವರಾಗಿದ್ದ ಸಮಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ತಂದರು. ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಎಂದು ಸಲಹೆ ಮಾಡಿದ್ದರು. ಕೇಂದ್ರ ಶಿಕ್ಷಣ ಸಲಹಾ ಮಂಡಳಿಯ ಅಧ್ಯಕ್ಷರಾಗಿದ್ದ ಅಜಾದ್ ಅವರು ವಯಸ್ಕರ ಶಿಕ್ಷಣಕ್ಕು ಸಹ ಪ್ರಾಮುಖ್ಯತೆ ನೀಡಿದರು. ವಿಶ್ವವಿದ್ಯಾಲಯ ಅನುದಾನ ಆಯೋಗದ ರಚನೆ, ಬೆಂಗಳೂರಿನಲ್ಲಿ ಭಾರತೀಯ ವಿಜ್ಞಾನ ಸಂಸ್ಥೆ ಮತ್ತು ದೆಹಲಿ ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನ ವಿಭಾಗ ತೆರೆಯಲು ಒತ್ತು ನೀಡಿದರು. ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯದ ಸಂಸ್ಥಾಪಕರಲ್ಲಿ ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಸಹ ಒಬ್ಬರಾಗಿದ್ದಾರೆ ಎಂದರು.**(2ನೇ ಪುಟಕ್ಕೆ)**

## ಶ್ರೀ ವಾಸವಿ ಯುವಜನ ಸಂಘ ವತಿಯಿಂದ ನಡೆದ 8 ನೇ ಕಾರ್ತಿಕ ದೀಪೋತ್ಸವ

ಯುವ ಮಾರ್ಗ ಸುದ್ದಿ




**ಮಾನ್ವಿ,ನ.11–**ಪಟ್ಟಣದ ಶ್ರೀನಗರೇಶ್ವರ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಶ್ರೀವಾಸವಿ ಯುವಜನ ಸಂಘ ವತಿಯಿಂದ ನಡೆದ 8 ನೇ ಕಾರ್ತಿಕ ದೀಪೋತ್ಸವ ಕಾರ್ಯಕ್ರಮಕ್ಕೆ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ತಾ,ಅಧ್ಯಕ್ಷರಾದ ಆರ್.ಮುತ್ತುರಾಜ್ ಶೆಟ್ಟಿ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿ ಕತ್ತಲಿನಿಂದ ಬೆಳಕಿನ ಕಡೆ ನಡೆಯುವುದೆ ಕಾರ್ತಿಕ ದೀಪೋತ್ಸವ ವಾಗಿದೆ ಎಂದು ತಿಳಿಸಿದರು.

ಧರ್ಮ ಮತ್ತು ಸಂಸ್ಕೃತಿ ವಿಷಯದ ಕುರಿತು ವಾಗ್ಮಿ ಹಾರಿಕ ಮಂಜುನಾಥ ಉಪನ್ಯಾಸ ನೀಡಿ ಯಾವುದು ಧರಿಸಲ್ಪಡುತ್ತದೆಯೊ ಅದೆ ಧರ್ಮ ಎನ್ನಿಸಿಕೊಳ್ಳುತ್ತದೆ .ಕಾರ್ತಿಕ ದೀಪದ ಪ್ರಭೆಯಲ್ಲಿ ಬರುವ ಎಲ್ಲರೀಗೂ ಕೂಡ ಭಗವಂತನ ಅನುಗ್ರಹ ದೊರೆಯುತ್ತದೆ. ಅಗ್ನಿ ಸ್ವರೂಪದಲ್ಲಿ ಜಗನ್ಮಾತೆಯಾದ ವಾಸವಿ ಮಾತೆಯು ನಮ್ಮಗೆ ಕಾಣುವ ಮೂಲಕ ನಮ್ಮ ಅಂತರಂಗದಲ್ಲಿ ಚಲನಾ ಶಕ್ತಿಯನ್ನು ಬೆಳಗಿಸುತ್ತಾಳೆ ಸಮಾಜದಲ್ಲಿ ಎಲ್ಲಾ ಸಮಯಗಳಲ್ಲಿ ಹಾಗೂ ಎಲ್ಲಾ ಕಾಲಗಳಲ್ಲಿ ಧರ್ಮದ ಕಾರ್ಯಗಳಿಗೆ, ಹಾಗೂ ಧರ್ಮದ ರಕ್ಷಣೆಯ ಸಮಯದಲ್ಲಿ, ಮುಂದಿನ ಪಿಳಿಗೆಗೆ ಧರ್ಮವನ್ನು ಮುಂದುವರೆಸುವಲ್ಲಿ ಆರ್ಯವೈಶ್ಯ ಸಮುದಾಯದವರು ನಿರಂತರವಾಗಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ ನಮ್ಮ ಮನೆಗಳಲ್ಲಿನ ಮಕ್ಕಳಿಗೆ ಹಿಂದಿನಿಂದಲ್ಲೇ ಧಾರ್ಮಿಕ ಆಚರಣೆಗಳ ಬಗ್ಗೆ, ಧರ್ಮ ಗ್ರಂಥಗಳಲ್ಲಿನ ಬೋಧನೆಗಳ ಬಗ್ಗೆ ,ಆಚರಣೆಗಳ ಬಗ್ಗೆ ಪಾಲಕರು ಅಭ್ಯಾಸ ಮಾಡಿಸಿದಾಗ ಮಾತ್ರ ಮುಂದಿನ ಪಿಳಿಗೆಗೆ ಹಿಂದೂ ಧರ್ಮ ಮುಂದುವರೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶ್ರೀವಾಸವಿ ಯುವಜನ ಸಂಘ ವತಿಯಿಂದ ವಾಗ್ಮಿ ಹಾರೀಕ ಮಂಜುನಾಥ, ನ.ಯೋ.ಪ್ರ. ನಾಮನಿರ್ದೇಶನ ಸದಸ್ಯರಾಗಿ ನೂತನವಾಗಿ ಆಯ್ಕೆಯಾಗಿರುವ ಮನ್ನಾಲಿ ಯಂಕಯ್ಯಶೆಟ್ಟಿ, ಹಿರಿಯ ಉಪನ್ಯಾಸಕರಾದ ಭಂಡಾರಿ ಸತ್ಯನಾರಾಯಣ ಶೆಟ್ಟಿ,**(2ನೇಪುಟಕ್ಕೆ)**

## ವಿದ್ಯಾರ್ಥಿಗಳೂ ಪಠ್ಯೇತರ ಚಟುವಟಿಕೆಯಲಿ ಸಕ್ರೀಯವಾಗಿ ಭಾಗವಹಿಸಿ : ಗುರುರಾಜ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.11–** ಸರ್ಕಾರ ನೀಡುವ ಸೌಲಭ್ಯಗಳನ್ನು ಬಳಸಿಕೊಂಡು ಎಲ್ಲಾ ವಿದ್ಯಾರ್ಥಿಗಳೂ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಉತ್ತಮ ಪ್ರಜೆಗಳಾಗಬೇಕು ಎಂದು ಶಾಲಾ ಮುಖ್ಯ ಶಿಕ್ಷಕ ಗುರುರಾಜ ಹೇಳಿದರು.

ತಾಲೂಕಿನ ದೇವಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಮಕ್ಕಳಿಗೆ ಶೂ–ಸಾಕ್ಸ್ ವಿತರಿಸಿ ನಂತರ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ಬಾರಿಯೂ ಸಾರ್ವಜನಿಕ ಶಿಕ್ಷಣ ಇಲಾಖೆಯು ಸರ್ಕಾರಿ ಶಾಲಾ ಮಕ್ಕಳಿಗೆ ದಾಖಲಾತಿ ಆಂದೋಲನದ ಮೂಲಕ ಪ್ರವೇಶಾತಿ ನೀಡಿ ನಂತರ ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಬಿಸಿಯೂಟ ಇತರೇ ಸರ್ಕಾರಿ ಸೌಲಭ್ಯ ನೀಡುತ್ತಿದೆ.ಅದೇ ರೀತಿ ಶೂ ಸಾಕ್ಸ್ ಅನ್ನು ಸಹ ನೀಡಲಾಗಿದೆ. ಇದನ್ನು ಪ್ರತಿಯೊಬ್ಬ ಪೋಷಕರು ಬಳಸಿಕೊಂಡು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವ ಮೂಲಕ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಎಸ್ಡಿಎಂಸಿ ಅಧ್ಯಕ್ಷರಾದ ದೇವಪ್ಪ, ಉಪಾಧ್ಯಕ್ಷರಾದ ಲಿಂಗಪ್ಪ, ಗ್ರಾಮದ ಮುಖಂಡರಾದ ಯಂಕೋಬ,ಶಿಕ್ಷಕ ರಾಮನಗೌಡ, ಹಾಗೂ ಸಹ ಶಿಕ್ಷಕಿಯರಾದ ದುರ್ಗಮ್ಮ, ಉಮಾದೇವಿ, ಹುಲ್ಲಿಗೇಮ್ಮ, ಸಾವಿತ್ರಿ, ಹಾಗೂ ನಾಗರತ್ನ ಸೇರಿದಂತೆ ಇನ್ನಿತರರು ಹಾಜರಿದ್ದರು.

## ಮೊದಲನೇಯ ಪುಟದಿಂದ

# ವೀರವನಿತೆ ಒನಕೆ ಓಬವ್ವನ ಧೈರ್ಯ, ಸಾಹಸ ಮಹಿಳೆಯರಿಗೆ ಸ್ಫೂರ್ತಿ: ಜಿಲ್ಲಾಧಿಕಾರಿ ನಿತೀಶ್ ಕೆ.

ವಿದ್ಯಾರ್ಥಿನಿಯರು ಉನ್ನತ ವ್ಯಾಸಾಂಗ ಮಾಡಬೇಕು ಎಂದು ಸಲಹೆ ಮಾಡಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ವೀರ ವನಿತೆ ಒನಕೆ ಓಬವ್ವ ಜಯಂತಿ ಆಚರಣೆಯ ಉದ್ದೇಶ ವಿದ್ಯಾರ್ಥಿನಿಯರಿಗೆ ಸ್ಫೂರ್ತಿ ತುಂಬುವುದಾಗಿದೆ ಎಂದು ತಿಳಿಸಿದರು.

ದೇವದುರ್ಗ ತಾಲೂಕಿನ ಬಸವ ಪದವಿ ಪೂರ್ವ ಹಾಗೂ ಪದವಿ ಮಹಾವಿದ್ಯಾಲಯದ ಇತಿಹಾಸ ಉಪನ್ಯಾಸಕಿ ಮತ್ತು ಲೇಖಕಿ ಕುಮಾರಿ ಕೆ. ಶಿಲ್ಪಕಲಾ ಬೊಮ್ಮನಾಳ ಅವರು ವಿಶೇಷ ಉಪನ್ಯಾಸ ನೀಡಿ, ಒನಕೆ ಓಬವ್ವ ನಿಷ್ಠೆ ಹಾಗೂ ತ್ಯಾಗ ಮತ್ತು ಧೈರ್ಯದ ಸಂಗಮ. ನಮಗೆ ರಾಷ್ಟ್ರೀಯತೆಯ ಪರಿಕಲ್ಪನೆಯೇ ಬಂದಿರದ ಸಮಯದಲ್ಲಿ ಒನಕೆ ಓಬವ್ವ ಅವರು ಚಿತ್ರದುರ್ಗದ ಕೋಟೆಯ ರಕ್ಷಣೆಗೆ ಹೋರಾಡಿದ್ದಾರೆ. ನಾವೆಲ್ಲರೂ ಓಬವ್ವ ಅವರಿಂದ ಸ್ಫೂರ್ತಿ ಪಡೆಯಬೇಕು. ಒನಕೆ ಓಬವ್ವ ಚರಿತ್ರೆಯು ಸ್ತ್ರೀ ಸಬಲೀಕರಣಕ್ಕೆ ಸ್ಫೂರ್ತಿಯಾಗಿದೆ. ಅವರ ಚರಿತ್ರೆಯು ಯುವ ಜನತೆಗೆ ಪ್ರೇರಣೆ ನೀಡುತ್ತದೆ. ಪ್ರತಿಯೊಬ್ಬ ಪುರುಷನ ಸಾಧನೆಯ ಹಿಂದೆ ಹೆಣ್ಣಿನ ಶಕ್ತಿ ಇರುತ್ತದೆ ಎಂಬುದಕ್ಕೆ ಉದಾಹರಣೆ ಒನಕೆ ಓಬವ್ವ ಎಂದು ತಿಳಿಸಿದರು.

ನಮ್ಮ ನಮ್ಮ ಕೆಲಸವನ್ನು ನಾವು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಣೆ ಮಾಡಬೇಕು. ಪ್ರತಿಯೊಬ್ಬ ಮಹಿಳೆಯು ಸ್ವಾವಲಂಬಿಯಾಗಿ ಬದುಕಬೇಕು. ಆಂತರಿಕವಾಗಿ ಬದಲಾಗಬೇಕು. ಮಹಿಳಾಕುಲದ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸುವ ಅನೇಕ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರಿಗೆ ಸರಿ ಸಮಾನವಾಗಿ ಕೆಲಸ ಮಾಡಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ರಾಯಚೂರಿನ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಚನ್ನಬಸವ, ತಾಲೂಕು ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ ಕುಮಾರ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಸಮಾಜದ ಮುಖಂಡರಾದ ವಿನೋದ ಸಾಗರ್, ಎಮ್.ವಸಂತ, ಅರ್ಚಾನ, ಪ್ರಿಯದರ್ಶಿನಿ, ಲಲಿತಾ ಕೊಂಬಿನ್ ಸೇರಿದಂತೆ ಇತರರು ಇದ್ದರು. ಶಿಕ್ಷಕಿ ಯಶೋಧ ನಿರೂಪಿಸಿದರು. ಸತ್ಯವತಿ ದೇಶಪಾಂಡೆ ಸ್ವಾಗತಿಸಿದರು.

# ಕಲಿಕೆಯೇ ಶಿಕ್ಷಣದ ಮಹತ್ ಕಾರ್ಯ: ಪ್ರವೀಣ್ ಕುಮಾರ್

**ಜಾಥಾಕ್ಕೆ ಚಾಲನೆ:** ವೇದಿಕೆಯ ಕಾರ್ಯಕ್ರಮಕ್ಕು ಮುನ್ನ ನಗರದ ಜಿಲ್ಲಾ ಕ್ರೀಡಾಂಗಣದ ಹತ್ತಿರದ ಹಾಸ್ಮಿಯ್ ಶಾಲಾ ಆವರಣದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯ ಅರಿವು ಸಪ್ತಾಹ ಜಾಥಾ ನಡೆಯಿತು. ನಗರದ ಬಸವೇಶ್ವರ ವೃತ್ತದಿಂದ ಆರಂಭವಾಗಿ ಚಂದ್ರಮೌಳೇಶ್ವರ ವೃತ್ತದ ಮಾರ್ಗವಾಗಿ ಚಂದ್ರಬಂಡ ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ಶಾಲೆಯವರೆಗೆ ಜಾಥಾ ಸಾಗಿತು.

ಗಮನ ಸೆಳೆದ ವೇಷಧಾರಿಗಳು: ಮಹಾತ್ಮ ಗಾಂಧಿ, ಲಾಲ್ ಬಹಾದ್ದೂರ್ ಶಾಸ್ತ್ರಿ, ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್, ವೀರವನಿತೆ ಒನಕೆ ಓಬವ್ವ ಸೇರಿದಂತೆ ಅನೇಕ ರಾಷ್ಟ್ರೀಯ ನಾಯಕರ ವೇಷಧಾರಿಗಳಾಗಿ ಪುಟಾಣಿ ಮಕ್ಕಳು ಗಮನ ಸೆಳೆದರು. ಮೆಚ್ಚುಗೆ ಪಡೆದ ವೇಷಧಾರಿಗಳಿಗೆ ಬಹುಮಾನ ನೀಡಲಾಯಿತು.

ಇದೇ ಸಂದರ್ಭದಲ್ಲಿ ಅರಕೇರಾ ತಹಶಿಲ್ದಾರ್ ಅಮರೇಶ ಬಿರಾದಾರ್, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ವಿಸ್ತರಣಾಧಿಕಾರಿ ಮೈಬೂಬ್ ಸಾಬ್, ವಿವಿಧ ಶಾಲೆಯ ಪ್ರಾಂಶುಪಾಲರಾದ ಚೇತನ, ಲಕ್ಷ್ಮೀಕಾಂತ್, ವಸತಿ ನಿಲಯಪಾಲಕರಾದ ನಾಗೇಂದ್ರ ಪೂಜಾರಿ, ರೇವಣಸಿದ್ದಪ್ಪ, ನಾಗವೇಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ಲೆಕ್ಕ ಅಧಿಕ್ಷಕರಾದ ವೆಂಕಟೇಶ, ಎಫ್.ಡಿ.ಎ ಮಲೇಶ, ಕಟ್ಟೆಪ್ಪ ಸೇರಿದಂತೆ ವಿವಿಧ ಶಾಲೆಯ ವಿದ್ಯಾರ್ಥಿಗಳು ಇದ್ದರು.

## ತುರವಿಹಾಳ ಸರ್ಕಾರಿ ಆಸ್ಪತ್ರೆಯ ಡಯಾಲಿಸೀಸ್ ಘಟಕಕ್ಕೆ ಶಾಸಕ ಆರ್.ಬಸನಗೌಡ ತುರವಿಹಾಳ ಭೇಟಿ

ಹೋಗದಂತೆ ಸಮುದಾಯ ಆರೋಗ್ಯ ಕೇಂದ್ರದ ಸದುಪಯೋಗ ಪಡೆಯಲು ಗ್ರಾಮೀಣ ಜನರಿಗೆ ಹೆಚ್ಚಿನ ಮಾಹಿತಿ ನೀಡಲು ಸೂಚಿಸಿದರು.

ಇದೇ ಸಂದರ್ಭದಲ್ಲಿ ಪಟ್ಟಣ ಪಂಚಾಯತ ಅಧ್ಯಕ್ಷ ಬಾಪೂಗೌಡ ದೇವರಮನಿ, ಉಪಾಧ್ಯಕ್ಷರಾದ ಲಕ್ಷ್ಮೀ ಸೋಮನಾಥ, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಯ್ಯನಗೌಡ, ಪ್ರಸೂತಿ ತಜ್ಞೆ.ಡಾ.ಜೀವನ ಜ್ಯೋತಿ, ಮಕ್ಕಳ ತಜ್ಞೆ.ಡಾ.ದೀಪಿಕಾ, ಆಯುಷ್ ವೈದ್ಯ ಡಾ.ವೀರುಪಾಕ್ಷಪ್ಪ, ಡಯಾಲಿಸಿಸ್ ತಂತ್ರಜ್ಞೆ ಅಂಬಿಕಾ ಸೇರಿದಂತೆ ಪಟ್ಟಣ ಪಂಚಾಯತ ಸದಸ್ಯರು, ಆಸ್ಪತ್ರೆಯ ಸಿಬ್ಬಂದಿ ಜಯಲಕ್ಷ್ಮಿ, ಮಹೇಶ್ವರಿ, ಶಶಿಕಲಾ, ಅನ್ನಪೂರ್ಣ, ಚೈತ್ರಾ, ವೇಂಕಟೇಶ ಸೇರಿದಂತೆ ಇತರರು ಇದ್ದರು.

## ಶ್ರೀ ವಾಸವಿ ಯುವಜನ ಸಂಘ ವತಿಯಿಂದ ನಡೆದ 8 ನೇ ಕಾರ್ತಿಕ ದೀಪೋತ್ಸವ

ಶಿಕ್ಷಕಿ ಬಿ.ಟಿ. ಲಕ್ಷ್ಮೀ,ಸಿ.ಆರ್,ಪಿ, ವೆಂಕಟೇಶ ಬೈಲಮರ್ಚೆಡ್, ಅತ್ಯತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ಶಿಕ್ಷಕಿ ವಿ, ದೀಪಾ,ರಾಷ್ಟ್ರೀಯ ಮಟ್ಟದ ಕರಾಟೆ ಚಾಂಪಿಯನ್ ಆರಾಧ್ಯ ರವರನ್ನು ಕಾರ್ಯಕ್ರಮದಲ್ಲಿ ಸಮ್ಮಾನಿಸಿ ಗೌರವಿಸಲಾಯಿತು.

ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಸಾಮೂಹಿಕವಾಗಿ ದೀಪವನ್ನು ಬೆಳಗಿಸುವ ಮೂಲಕ ಕಾರ್ತಿಕ ದೀಪೋತ್ಸವವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ನ.ಯೋ.ಪ್ರ. ಸದಸ್ಯರಾದ ಮನ್ನಾಲಿ ಯಂಕಯ್ಯಶೆಟ್ಟಿ, ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ಕಾರ್ಯದರ್ಶಿ ಬಿ.ಈರಣ್ಣ ಶೆಟ್ಟಿ, ಕೇಶವಯ್ಯಶೆಟ್ಟಿ,ವಲ್ಲೂರುರಮೇಶ, ಶ್ರೀ ವಾಸವಿ ಯುವಜನ ಸಂಘದ ಗೌ.ಅಧ್ಯಕ್ಷರಾದ ಗಾಣದಾಳ ಆಂಜನೇಯ್ಯ, ತಾ.ಅಧ್ಯಕ್ಷರಾದ ವಲ್ಲೂರು ಬಸವರಾಜ, ಕಾರ್ಯದರ್ಸಿ ಕೊಂಡ ಶ್ರೀಕಾಂತ ಶೆಟ್ಟಿ,ಬಿ.ರಾಮಚಂದ್ರ, ನಿಕಟ ಪೂರ್ವ ಅಧ್ಯಕ್ಷರಾದ ಕೆ.ನವೀನ್ ಕುಮಾರ ಪೋತ್ನಾಳ್,ಶ್ರೀ ವಾಸವಿ ಮಹಿಳಾ ಮಂಡಳಿಯ ಅಧ್ಯಕ್ಷರಾದ ಜೆ.ಲಕ್ಷ್ಮೀ ರಾಮಾಂಜನೇಯ್ಯಶೆಟ್ಟಿ ಶ್ರೀ ವಾಸವಿ ವನಿತಾ ಸಂಘದ ಅಧ್ಯಕ್ಷರಾದ ರಿಂದ ರಾಘವೇಂದ್ರ ಶೆಟ್ಟಿ ಸೇರಿದಂತೆ ಅವೋಪ ಸಂಘದ ಪದಾಧಿಕಾರಿಗಳು ಹಾಗೂ ಆರ್ಯವೈಶ್ಯ ಸಮುದಾಯದ ಮುಖಂಡರು ಭಾಗವಹಿಸಿದರು.

# ಉಗ್ರರ ದಾಳಿಯ ಪ್ರತೀಕಾರಕ್ಕೆ ಸಜ್ಜಾದ ಸೇನೆ..?

ವೃತ್ತಿಯಲ್ಲಿರು ವ ಮೂವರು ವೈದ್ಯರು ಮತ್ತು ಒಬ್ಬ ಮಹಿಳಾ ವೈದ್ಯೆಯ ಸಹಾಯದೊಂದಿಗೆ ನಡೆದಿದೆ ಎನ್ನಲಾಗಿದೆ.

ತನಿಖೆಯ ಪ್ರಾಥಮಿಕ ವರದಿಗಳ ಪ್ರಕಾರ, ಡಾ.ಉಮರ್, ಡಾ. ಮುಜಾಮಿಲ್ ಮತ್ತು ಡಾ.ಆದಿಲ್ ಸ್ಫೋ?ಟದಲ್ಲಿ ಭಾಗಿಯಾದ ಮುಖ್ಯ ಆರೋಪಿಗಳು. ಇವರೆಲ್ಲರೂ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಆದರೆ ಇವರ ನಿಜವಾದ ಗುರುತು ಜೈಷ್-ಎ-ಮೊಹಮದ್ ಸಕ್ರಿಯ ಸ್ಲಿ?ಪರ್ ಸೆಲ್ ಸದಸ್ಯರು ಎಂಬುದು ಬಯಲಾಗಿದೆ.ಈ ಮೂವರು ವೈದರು ದೆಹಲಿಯ ಜನದಟ್ಟಣೆಯ ಪ್ರದೇಶದಲ್ಲಿ ಬಾಂಬ್ ಇಟ್ಟು, ದೂರ ನಿಯಂತ್ರಣದ ಮೂಲಕ ಸ್ಫೋ?ಟಿಸಿದ್ದಾರೆ ಎಂದು ಪೊಲೀಸ್? ಮೂಲಗಳು ತಿಳಿಸಿವೆ. ಈ ಸ್ಫೋ?ಟದಲ್ಲಿ 12 ಮಂದಿ ಸಾವನ್ನಪ್ಪಿದ್ದು, 50ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.ಈ ಪುರುಷ ವೈದ್ಯರಿಗೆ ಮಹಿಳಾ ವೈದ್ಯೆ ಡಾ. ಶಾಹೀನಾ ನೆರವು ನೀಡಿದ್ದಾರೆ ಎಂದು ಹೇಳಲಾಗಿದೆ. ಡಾ.ಶಾಹೀನಾ ದೆಹಲಿಯ ಪ್ರಿತಷ್ಠಿತ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದು, ಆಕೆಯ ಮೂಲಕವೇ ಬಾಂಬ್ ತಯಾರಿಕೆಗೆ ಅಗತ್ಯ ವಸ್ತುಗಳು ಮತ್ತು ಮಾಹಿತಿ ಸಂಗ್ರಹವಾಗಿದೆ ಎಂದು ತನಿಖಾಧಿಕಾರಿಗಳು ಹೇಳಿದ್ದಾರೆ.ಈ ಘಟನೆಗೆ ಭಾರತೀಯ ವಾಯುಪಡೆಯ ಆಪರೇಷನ್ ಸಿಂಧೂರಕ್ಕೆ ನೇರ ಪ್ರತೀಕಾರವೇ ಎಂದು ಅನುಮಾನ ವ್ಯಕ್ತವಾಗಿದೆ. ಆಪರೇಷನ್ ಸಿಂಧೂರ ವೇಳೆ (2025ರ ಮೇ ತಿಂಗಳಲ್ಲಿ) ಭಾರತೀಯ ವಾಯುಪಡೆ ಪಾಕಿಸ್ತಾನದ ಬಹಾವಲ್ಪುರ ಪ್ರದೇಶದ ಮೇಲೆ ದಾಳಿ ನಡೆಸಿತ್ತು. ಬಹಾವಲ್ಪುರದಲ್ಲಿ ಜೈಷ್-ಎ-ಮೊಹಮದ್‌ನ ಪ್ರಮುಖ ತರಬೇತಿ ಶಿಬಿರವೊಂದನ್ನು ಸಂಪೂರ್ಣ ಧ್ವಂಸಗೊಳಿಸಲಾಗಿತ್ತು.

# ಮೌಲಾನಾ ಅಬುಲ್ ಕಲಾಂ ಆಜಾದ್ ಎಂದರೆ ಶಿಕ್ಷಣ ಕ್ರಾಂತಿಯ ಪಿತಾಮಹ : ಎಲ್ ಚಿಗರಿ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.11**–ಭಾರತದ ಶಿಕ್ಷಣ ಕ್ಷೇತ್ರದಲ್ಲಿನ ಯು.ಜಿ.ಸಿ. ಎಂ.ಹೆಚ್.ಆರ್.ಡಿ., ಐಐಟಿ, ಮತ್ತು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಇವರ ಪಾತ್ರ ಸ್ಮರಣೀಯ ಾವಾಗಿದೆ. ಬಹುಮುಖ ಕ್ಷೇತ್ರದಲ್ಲಿ ಹಲವಾರ ದಿಟ್ಟ ಹೆಜ್ಜೆಗಳನ್ನು ಇಡುತ್ತಾ ದೇಶ ಬದಲಾವಣೆಯ ಕ್ರಾಂತಿಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಸುಮಾರು 6 ಭಾಷೆ ಬಲ್ಲಂತಹ, ಲೇಖನಿಯ ಮೂಲಕ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮೇಧಾವಿ ಮತ್ತು ಪತ್ರಿಕಾ ರಂಗದಲ್ಲಿ ಸ್ವಾತಂತ್ರ್ಯ ಕಿಚ್ಚು ಹಚ್ಚುವಲ್ಲಿ ಇವರ ನಡೆ ಗಮನರ್ಹವಾಗಿವೆ ಎಂದು ವಿಶೇಷ ಉಪನ್ಯಾಸದಲ್ಲಿ ಬಸವರಾಜ್ ಎಲ್. ಚಿಗರಿ ಅಭಿವ್ಯಕ್ತಪಡಿಸಿದರು.

ಸರ್ಕಾರಿ ಬಾಷುಮಿಯ ಪ್ರಥಮ ಧರ್ಜೆ ಕಾಲೇಜು ಮತ್ತು ಆಜಾದ್ ಅಕಾಡೆಮಿ ಮಾನವಿ ವತಿಯಿಂದ ರಾಷ್ಟ್ರೀಯ ಶಿಕ್ಷಣ ದಿನವನದ ವಿಶೇಷ ಉಪನ್ಯಾಕರಾಗಿ ಮಾತನಾಡಿದರು,

ಪ್ರಾಚಾರ್ಯರು ಜೆ.ಎಲ್.ಈರಣ್ಣ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ "ಭಾರತ ದೇಶವು ವಿವಿದತೆಯಲ್ಲಿ ಏಕತೆ, ಐಕ್ಯತೆ, ಸ್ವಾತಂತ್ರ್ಯ, ಸಮಾನತೆ, ಭಾವೈಕ್ಯತೆಯ ಮಂತ್ರಗಳ ಬೀಜ ಬಿತ್ತುವ ಮೂಲಕ ಸ್ವಾತಂತ್ರ್ಯ ಕಾಲದ ಭಾರತದಲ್ಲಿ ಶಿಕ್ಷಣ ಮೂಲಭೂತವನ್ನಾಗಿಸಿದ ಮಾಹಾನ್ ಶಿಕ್ಷಣ ಪ್ರೇಮಿ, ಚಿಂತಕ, ಹೋರಾಟಗಾರ, ಸಂಪಾದಕ, ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ಭಾರತ ಕಂಡ ಅದ್ಭುತ ನಾಯಕ ಎಂದರು.

ಆಜಾದ್ ಅಕಾಡೆಮಿ ಮಾನ್ವಿ ವತಿಯಿಂದ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜೀವನ ಮತ್ತು ಶಿಕ್ಷಣದ ಕ್ರಾಂತಿಯ ಕುರಿತು ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಿ ಪ್ರಥಮ ಸ್ಥಾನ 5000 ರೂ ಪ್ರಶಸ್ತಿ ಪತ್ರ, ಅಲಿನಾ ಇಕ್ರಾ ಇವರಿಗೆ, ದ್ವಿತಿಯ ಸ್ಥಾನ 3000 ರೂ ಪ್ರಶಸ್ತಿ ಪತ್ರ ಕೀರ್ತಿ ಇವರಿಗೆ, ತೃತೀಯ 1000 ರೂ ಪ್ರಶಸ್ತಿ ಪತ್ರ ವಿನೋದ್ ಇವರಿಗೆ, ಸಮಾಧಾನಕರ ಬಹುಮಾನ ರೂಪದಲ್ಲಿ 4ನೇ ಯಿಂದ 10ನೇ ವರೆಗಿನ ಸ್ಥಾನಗಳಿಗೆ ತಲಾ 500 ರೂ ಮತ್ತು ಪ್ರಶಸ್ತಿ ಪತ್ರವನ್ನು ಭೀಮಮ್ಮ, ಶೈನಾಜ್ ಬೇಗಂ, ಗೋವಿಂದಾ, ಆಯಿಷಾ, ಅಂಜುಮ್ ಪಾತೀಮಾ ಮತ್ತು ಜಬಿನ್ನಿಸಾ ಪಡೆದರು.

ವೇದಿಕೆಯಲ್ಲಿ ಸಹ ಪ್ರಾಧ್ಯಾಪಕರಾದ ಸೈಯದ್ ಮಿನಾಜ್ ಉಲ್ ಹಸನ್, ಸೈಯದ್ ಮುಜೀಬ್ ಅಹ್ಮದ್, ಚನ್ನಬಸವ, ಶಶಿಕುಮಾರ್, ಆಜಾದ್ ಅಕಾಡೆಮಿಯ ಮಹಿಬೂಬ್ ಮದ್ಲಾಪುರ, ಮಿರ್ಜಾ ಮಹ್ಮದ್ ಬೇಗ್, ಎಂ.ಡಿ.ಸಮೀರ್ ಉಪಸ್ಥಿತರಿದ್ದರು. ವಿವಿಧ ಕಾಲೇಜಿನಿಂದ ಬಂದ ವಿದ್ಯಾರ್ಥಿಗಳು ಮತ್ತು ಬಾಷು ಮಿಯಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಲ್ಲಾ ವಿಭಾಗಗಳ ವಿದ್ಯಾರ್ಥಿಗಳು ಭಾಗಿಯಾಗಿದ್ದರು.

# ಸಹಿ ಸಂಗ್ರಹ ಹೆಸರಿನಲ್ಲಿ ಜನರಿಗೆ ವಂಚನೆ- ಬಿಜೆಪಿ ಆರೋಪ



**ಅಳಂದ,ನ.11**–ಮತಗಳ್ಳತನದ ಆರೋಪ ಮಾಡುತ್ತಿರುವ ಕಾಂಗ್ರೆಸ್ ಪಕ್ಷದವರು ಸಹಿ ಸಂಗ್ರಹ ಅಭಿಯಾನದ ಹೆಸರಿನಲ್ಲಿ ಜನಸಾಮಾನ್ಯರಿಗೆ ಆಮಿಶವೊಡ್ಡಿ ಸಹಿ ಮಾಡಿಕೊಳ್ಳುತ್ತಿದ್ದಾರೆ ಎಂದು ಆಳಂದ ಮಂಡಲ ಬಿಜೆಪಿ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಆಳಂದ ಮತಕ್ಷೇತ್ರದ ವ್ಯಾಪ್ತಿಯ ಪಟ್ಟಣ ಮತ್ತು ಗ್ರಾಮೀಣ ಭಾಗದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮನೆ ಮನೆಗೆ ತೆರಳಿ ವಸತಿ ಯೋಜನೆಯಡಿ ಮನೆ ನಿರ್ಮಾಣ, ಸಬ್ಸಿಡಿ ಯೋಜನೆಗಳು ಸೇರಿದಂತೆ ಅನೇಕ ಸರ್ಕಾರಿ ಸವಲತ್ತುಗಳನ್ನು ತಮ್ಮ ತಲುಪಿಸಲಾಗುವುದು ಎಂದು ಆಮಿಶವೊಡ್ಡಿ ಸಹಿ ಸಂಗ್ರಹಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಅಲ್ಲದೇ ಸಹಿ ಮಾಡದಿದ್ದರೇ ತಾವು ಈಗಾಗಲೇ ಫಲಾನುಭವಿಗಳಾಗಿರುವ ಗೃಹಲಕ್ಷ್ಮೀ, ಶಕ್ತಿ, ಯುವ ನಿಧಿ ಸೇರಿದಂತೆ ಅನೇಕ ಯೋಜನೆಗಳನ್ನು ರದ್ದುಪಡಿಸುವುದಾಗಿ ಜನರಿಗೆ ಹೆದರಿಸಿ ಸಹಿ ಮಾಡಿಕೊಳ್ಳುತ್ತಿದ್ದಾರೆ ಇದು ಅಧಿಕಾರದ ಸಂಪೂರ್ಣ ದೂರುಪ ಯೋಗವಾಗಿದೆ ಎಂದು ತಿಳಿಸಿದ್ದಾರೆ.

ಸಂಧ್ಯಾ ಸುರಕ್ಷಾ ಯೋಜನೆ, ಬೆಳೆ ವಿಮೆ, ಪರಿಹಾರ, ಪಡಿತರ ಆಹಾರ ಧಾನ್ಯ, ಬಿಪಿಎಲ್ ಕಾರ್ಡ ರದ್ದು ಸೇರಿದಂತೆ ಅನೇಕ ಯೋಜನೆಗಳಿಂದ ತಾವು ವಂಚಿತರಾಗಲಿದ್ದೀರಿ ಅಲ್ಲದೇ ಮುಂದಿನ ದಿನಗಳಲ್ಲಿ ತಮಗೆ ಯಾವುದೇ ರೀತಿಯ ಸರ್ಕಾರದ ಯೋಜನೆಗಳು ದೊರೆಯುವುದಿಲ್ಲ ಎಂದು ಹೇಳಿ ಜನರನ್ನು ಭಯ ಭೀತರನ್ನಾಗಿ ಮಾಡುತ್ತಿ ದ್ದಾರೆ ಎಂದು ಆರೋಪ ಮಾಡಿದ್ದಾರೆ.

ಜಿಲ್ಲಾಡಳಿತ ಮತ್ತು ತಾಲೂಕಾ ಆಡಳಿತ ಕೂಡಲೇ ಮಧ್ಯೆ ಪ್ರವೇಶಿಸಿ ಈ ಕೆಲಸ ಮಾಡುತ್ತಿರುವ ಕಾಂಗ್ರೆಸ್ ಕಾರ್ಯಕರ್ತರ ಮೇಲೆ ಸ್ವಯಂ ಪ್ರೇರಿತ ದೂರು ದಾಖಲಿಸಿ ಅವರ ಮೇಲೆ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಇಲ್ಲದಿದ್ದರೇ ತಾಲೂಕಿನ ನಾಗರಿಕರು ಹಾಗೂ ಬಿಜೆಪಿ ಕಾರ್ಯಕರ್ತರ ಜೊತೆಗೂಡಿ ಉಗ್ರ ಸ್ವರೂಪದ ಹೋರಾಟ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಸೂಕ್ತ ಬೆಲೆ ಇಲ್ಲದೆ ರಸ್ತೆಗೆ ಈರುಳ್ಳಿ ಎಸೆದು ರೈತರು ಕಣ್ಣೀರು.!



ಯುವ ಮಾರ್ಗ ಸುದ್ದಿ

**ಮಸ್ಕಿ,ನ.11**–ಪಟ್ಟಣದಲ್ಲಿ ಈರುಳ್ಳಿ ಬೆಲೆ ದಿಢೀರ್ ಕುಸಿತ ಕಂಡಿದ್ದು,ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ.ಕಷ್ಟಪಟ್ಟು ಬೆಳೆದ ಈರುಳ್ಳಿ ಕೈಗೆ ಬಂದರೂ,ಮಾರುಕಟ್ಟೆಯಲ್ಲಿ ಬೆಲೆ ಸಿಗದೆ ರೈತರು ಕಣ್ಣೀರು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ.

ಬೆಲೆಯ ತೀವ್ರ ಕುಸಿತ :ಪ್ರತಿ ಭಾನುವಾರ ನಡೆಯುವ ವಾರದ ಸಂತೆಯಲ್ಲಿ ಈರುಳ್ಳಿ ದರ ಪಾತಾಳಕ್ಕೆ ಕುಸಿದಿದೆ. ಒಂದು ಕೆಜಿ ದೊಡ್ಡ ಗಾತ್ರದ ಈರುಳ್ಳಿಗೆ ಕೇವಲ 15 ರೂಪಾಯಿ,ಸಣ್ಣ ಗಾತ್ರದ ಈರುಳ್ಳಿಗೆ 5 ರಿಂದ 10 ರೂಪಾಯಿ ಮಾತ್ರ ಸಿಗುತ್ತಿದೆ.ಇನ್ನೂ,ಒಂದು ಚೀಲ ಈರುಳ್ಳಿ 100 ರೂಪಾಯಿಗೆ ಮಾರಾಟವಾಗುತ್ತಿದೆ.

ರೈತರ ಹರಸಾಹಸ ಮತ್ತು ನಷ್ಟ ; ತಮ್ಮ ಬೆಳೆಗಳಿಗೆ ಮಾರುಕಟ್ಟೆ ಕಲ್ಪಿಸಲು ರೈತರು ಹರಸಾಹಸ ಪಡುತ್ತಿದ್ದಾರೆ.ಎಷ್ಟಕ್ಕಾದರೂ ಮಾರಾಟವಾಗಲಿ ಎಂದು ನಂಬಿ ಸಂತೆ ಮಾರುಕಟ್ಟೆಗೆ ತಂದರೆ,ವ್ಯಾಪಾರಸ್ಥರು ಖರೀದಿಸಲು ಹಿಂದೇಟು ಹಾಕುತ್ತಿದ್ದಾರೆ.ವಾಹನ ಬಾಡಿಗೆ ಖರ್ಚು ಸಹ ರೈತರೇ ಭರಿಸಬೇಕಾದ ದುಸ್ಥಿತಿ ಎದುರಾಗಿದೆ.ಇದರಿಂದ ಬೇಸರಗೊಂಡ ಈರುಳ್ಳಿ ಬೆಳೆಗಾರರು ಮತ್ತು ಮಾರಾಟಗಾರರು,ಸಂಜೆಯ ವೇಳೆಗೆ ಮಾರಾಟವಾಗದೆ ಉಳಿದ 25ಕ್ಕೂ ಹೆಚ್ಚು ಚೀಲ ಈರುಳ್ಳಿಯನ್ನು ಮಾರುಕಟ್ಟೆಯಲ್ಲೇ ಬಿಸಾಕಿ ನಿರಾಸೆಯಿಂದ ಮನೆಗೆ ಮರಳಿದ್ದಾರೆ.ಅದೇ ಏನೇ ಇರಲಿ ಈ ದೇಶದಲ್ಲಿ ಅನ್ನದಾತನ ಗೋಳು ಕೇಳುವವರು ಯಾರು ಇಲ್ಲ.

# ಸ್ಫೋಟ ತನಿಖೆಗೆ ವಿಶೇಷ ತಂಡ



**ನವದೆಹಲಿ, ನ. 11–** ರಾಷ್ಟ್ರ ರಾಜಧಾನಿ ದೆಹಲಿಯ ಐತಿಹಾಸಿಕ ಕೆಂಪುಕೋಟೆಯ ಮೆಟ್ರೋ ನಿಲ್ದಾಣದ ಬಳಿ ನಿನ್ನೆ ರಾತ್ರಿ ನಡೆದ ಕಾರು ಸ್ಫೋಟದ ತನಿಖೆಗೆ ಐಬಿ, ಎನ್‌ಐಎ, ಎನ್‌ಎಸ್‌ಜಿ, ಹಾಗೂ ಸ್ಥಳೀಯ ಪೊಲೀಸರ ವಿಶೇಷ ತಂಡವನ್ನು ರಚಿಸಲಾಗಿದ್ದು, ಬಾಂಬ್ ಸ್ಫೋಟದ ಬೆನ್ನಲ್ಲೇ ದೇಶದ ಎಲ್ಲೆಡೆ ಕಟ್ಟೆಚ್ಚರ ವಹಿಸಲಾಗಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆ ನಡೆಯಿತು.

ಈ ಮಧ್ಯೆ ಬಾಂಬ್ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ 12ಕ್ಕೇರಿದೆ. ಸ್ಫೋಟದಲ್ಲಿ ಗಾಯಗೊಂಡಿದ್ದ ಇನ್ನೂ ಮೂವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಅಸುನೀಗಿದ್ದಾರೆ.

ದೆಹಲಿಯಲ್ಲಿ ನಿನ್ನೆ ಪ್ರಬಲ ಕಾರು ಸ್ಫೋಟ ನಡೆದ ಬೆನ್ನಲ್ಲೆ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ದೆಹಲಿಯ ಕರ್ತವ್ಯ ಭವನದಲ್ಲಿರುವ ಗೃಹ ಸಚಿವಾಲಯದ ಕಚೇರಿಯಲ್ಲಿ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆ ನಡೆದಿದ್ದು, ಸ್ಫೋಟದ ತನಿಖೆಗೆ ವಿಶೇಷ ತನಿಖಾ ತಂಡವನ್ನು ರಚಿಸುವ ತೀರ್ಮಾನ ಕೈಗೊಳ್ಳಲಾಗಿದೆ.

ಈ ವಿಶೇಷ ತನಿಖಾ ತಂಡದಲ್ಲಿ ಗುಪ್ತಚರ ದಳದ ರಾಷ್ಟ್ರೀಯ ತನಿಖಾದಳ, ವಿಶೇಷ ಭದ್ರತಾ ಪಡೆಯ ಅಧಿಕಾರಿಗಳು, ಹಾಗೂ ಪೊಲೀಸ್ ಅಧಿಕಾರಿಗಳು ಇರಲಿದ್ದು, ಈ ತಂಡ ಎಲ್ಲಾ ಆಯಾಮದಿಂದಲೂ ತನಿಖೆ ನಡೆಸಲಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ರವರ ನೇತೃತ್ವದಲ್ಲಿ ನಡೆದಿರುವ ಈ ಸಭೆಯಲ್ಲಿ ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ ಮೋಹನ್, ರಾ ಮತ್ತು ಎನ್‌ಐಎ ತನಿಖಾ ಸಂಸ್ಥೆಗಳ ಮುಖ್ಯಸ್ಥರು, ದೆಹಲಿ ಪೊಲೀಸ್ ಆಯುಕ್ತರು ಸೇರಿದಂತೆ ಗೃಹ ಇಲಾಖೆಯ ಉನ್ನತಾಧಿಕಾರಿಗಳು ಪಾಲ್ಗೊಂಡಿದ್ದಾರೆ.

**ನಾಳೆ ಸಚಿವ ಸಂಪುಟ ಭದ್ರತಾ ಸಮಿತಿ ಸಭೆ–**ದೆಹಲಿಯ ಬಾಂಬ್ ಸ್ಫೋಟದ ಹಿನ್ನಲೆಯಲ್ಲಿ ನಾಳೆ ಸಂಜೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಕೇಂದ್ರ ಸಚಿವ ಸಂಪುಟದ ಭದ್ರತಾ ಸಮಿತಿಯ ಸಭೆ ನಡೆಯಲಿದೆ. ಈ ಸಭೆಯಲ್ಲಿ ಬಾಂಬ್ ಸ್ಫೋಟಕ್ಕೆ ಸಂಬಂಧಿಸಿದಂತೆ ವಿಸ್ತೃತ ಚರ್ಚೆಗಳು ನಡೆಯಲಿದ್ದು, ದೇಶದ ಭದ್ರತಾ ದೃಷ್ಟಿಯಿಂದ ಏನೆಲ್ಲಾ ಕ್ರಮಗಳು ಕೈಗೊಳ್ಳಬೇಕು ಎಂಬ ಸಭೆಯಲ್ಲಿ ಚರ್ಚೆ ನಡೆಸಲಾಗುತ್ತದೆ.ಈ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಜೈಶಂಕರ್, ಪ್ರಧಾನಿಗಳ ಭದ್ರತಾ ಸಲಹೆಗಾರ ಅಜಿತ್ ದೋವಲ್, ಸೇರಿದಂತೆ ವಿವಿಧ ತನಿಖಾದಳದ ಮುಖ್ಯಸ್ಥರುಗಳು ಭಾಗಿಯಾಗುವರು.

**ದೇಶಾದ್ಯಂತ ಕಟ್ಟೆಚ್ಚರ–**ದೆಹಲಿಯಲ್ಲಿ ಪ್ರಬಲ ಕಾರು ಬಾಂಬ್ ಸ್ಫೋಟ ಸಂಭವಿಸಿದ ಬೆನ್ನಲ್ಲೆ ಇಡೀ ದೇಶದಲ್ಲಿ ಹೈ ಅಲರ್ಟ್ ಘೋಷಿಸಲಾಗಿದ್ದು, ಪ್ರಮುಖ ನಗರ, ಪಟ್ಟಣ, ಐತಿಹಾಸಿಕ ಸ್ಥಳ, ವಿಮಾನ ನಿಲ್ದಾಣ, ರೈಲ್ವೆ ನಿಲ್ದಾಣ, ಬಸ್ ನಿಲ್ದಾಣಗಳಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದ್ದು, ಕಟ್ಟೆಚ್ಚರ ವಹಿಸಲಾಗಿದೆ.

ದೇಶದ ರೈಲ್ವೆ ನಿಲ್ದಾಣಗಳಲ್ಲಿ ಹಾಗೂ ಬಸ್ ನಿಲ್ದಾಣಗಳಲ್ಲಿ ಹೆಚ್ಚಿನ ಭದ್ರತೆ ಒದಗಿಸಲಾಗಿದ್ದು, ಇಲ್ಲಿ ಓಡಾಡುವವರ ಮೇಲೆ ನಿಗಾ ವಹಿಸಲಾಗಿದೆ.ರೈಲ್ವೆ ಹಾಗೂ ಬಸ್ ನಿಲ್ದಾಣಗಳಿಗೆ ಹೆಚ್ಚಿನ ಪೊಲೀಸರನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದ್ದು, ಪ್ರತಿಯೊಬ್ಬರನ್ನೂ ತಪಾಸಣೆ ಮಾಡಿ ಒಳ ಬಿಡಲಾಗುತ್ತಿದೆ. ಜತೆಗೆ ಲಗೇಜುಗಳ ಪರಿಶೀಲನೆಯೂ ನಡೆದಿದೆ.

ದೇಶದ ಎಲ್ಲಾ ವಿಮಾನ ನಿಲ್ದಾಣಗಳಲ್ಲೂ ಹೆಚ್ಚಿನ ಭದ್ರತೆ ಕಲ್ಪಿಸಲಾಗಿದ್ದು, ಭದ್ರತಾ ಸಿಬ್ಬಂದಿಗೆ ಸದಾ ಜಾಗೃತರಾಗಿರುವಂತೆ ಸೂಚನೆಯನ್ನು ನೀಡಲಾಗಿದೆ.

ಬಸ್, ರೈಲು ಮತ್ತು ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ಲಗೇಜುಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗುತ್ತಿದ್ದು, ಅನುಮಾನಾಸ್ಪದ ವಸ್ತುಗಳು ಕಂಡು ಬಂದರೆ ತಕ್ಷಣವೇ ವಶಕ್ಕೆ ಪಡೆದು ಸೂಕ್ತ ಕ್ರಮ ಕೈಗೊಳ್ಳುವಂತೆಯೂ ಸೂಚನೆ ನೀಡಲಾಗಿದೆ. ಪ್ರಯಾಣಿಕರನ್ನು ಸಹ ತೀವ್ರ ತಪಾಸಣೆಗೆ ಒಳಪಡಿಸಲಾಗಿದೆ.

ರೈಲು, ವಿಮಾನ ಮತ್ತು ಬಸ್ ನಿಲ್ದಾಣಗಳ ವಾಹನಗಳ ಪಾರ್ಕಿಂಗ್ ಸ್ಥಳಗಳಲ್ಲೂ ಹೆಚ್ಚಿನ ನಿಗಾ ವಹಿಸಿ ಭದ್ರತೆಯನ್ನು ಬಿಗಿಗೊಳಿಸಿ, ಪ್ರತಿಯೊಂದು ವಾಹನಗಳ ತಪಾಸಣೆಯನ್ನು ನಡೆಸಲಾಗುತ್ತಿದೆ.

**ದಾಳಿಕೋರರನ್ನು ಬಿಡಲ್ಲ: ಮೋದಿ ಎಚ್ಚರಿಕೆ–**ಬಾಂಬ್ ಸ್ಫೋಟದ ಹಿಂದಿರುವವರನ್ನು ಯಾವುದೇ ಸಂದರ್ಭದಲ್ಲಿ ಬಿಡುವುದಿಲ್ಲ ಈ ಸ್ಫೋಟದ ಕಾರಣವಾಗಿರುವ ಪ್ರತಿಯೊಬ್ಬರನ್ನೂ ಪತ್ತೆಹಚ್ಚಲಾಗುವುದು ಎಂದು ಪ್ರಧಾನಿ ಮೋದಿ ಹೇಳಿದರು.

ದೆಹಲಿಯ ಕೆಂಪುಕೋಟೆ ಬಳಿ ನಡೆದ ಭೀಕರ ಬಾಂಬ್ ಸ್ಫೋಟದ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ದಾಳಿಕಕೋರರಿಗೆ ಕಠೋರ ಎಚ್ಚರಿಕೆ ನೀಡಿದ್ದಾರೆ.

ಭೂತಾನ್‌ನ ಥಿಂಪು ನಗರದಲ್ಲಿ ಮಾತನಾಡಿರುವ ಅವರು ದೆಹಲಿಯ ಲಾಲ್ ಕಿಲ್ಲಾ (ರೆಡ್ ಫೋರ್ಟ್) ಬಳಿ ನಡೆದ ಈ ಆತ್ಮಘಾತುಕಾರಿ ಕಾರು ಬಾಂಬ್ ಸ್ಫೋಟದಲ್ಲಿ ಒಂಬತ್ತು ಜನರು ಸಾವನ್ನಪ್ಪಿದ್ದಾರೆ. ಈ ಘಟನೆ ಗಮನಾರ್ಹ ಭದ್ರತಾ ವ್ಯವಸ್ಥೆಗೆ ಸವಾಲು ಉಂಟುಮಾಡಿದೆ.

ಜನಸಮೂಹವನ್ನು ಕುರಿತು ಮಾತನಾಡಿದ ಪ್ರಧಾನಿ ಮೋದಿ ಅವರು ಈ ಸ್ಫೋಟವನ್ನು "ಭೀಕರ" ಎಂದು ವರ್ಣಿಸಿದ ಪ್ರಧಾನಿ "ಪೀಡಿತ ಕುಟುಂಬಗಳ ದುಃಖವನ್ನು ನಾನು ಅರ್ಥಮಾಡಿಕೊಳ್ಳುತ್ತೇನೆ. ಇಂದು ಸಂಪೂರ್ಣ ರಾಷ್ಟ್ರ ಅವರ ಜೊತೆ ನಿಂತಿದೆ," ಎಂದು ಅವರು ಸಂವೇದನೆಯನ್ನು ವ್ಯಕ್ತಪಡಿಸಿದರು.

ತನಿಖೆ ನಡೆಸುತ್ತಿರುವ ಎಲ್ಲಾ ಸಂಸ್ಥೆಗಳೊಂದಿಗೆ ನಾನು ಸಂಪರ್ಕದಲ್ಲಿದ್ದೆ. ನಮ್ಮ ಸಂಸ್ಥೆಗಳು ಈ ಸಂಚಿನಲ್ಲಿ ಭಾಗಿಯಾಗಿರುವ ಎಲ್ಲರನ್ನು ಪತ್ತೆ ಹಚ್ಚಲಿವೆ ಎಂದು ಭರವಸೆ ನೀಡಿದರು.

ಪ್ರಧಾನಿ ಮೋದಿ ಅವರು ತಮ್ಮ ಭಾಷಣದ ಮೂಲಕ ಸಂಚುಕೋರರಿಗೆ ಕಠಿಣ ಎಚ್ಚರಿಕೆಯನ್ನು ರವಾನಿಸಿದರು. "ಭಾರತವು ಪ್ರತಿ ಉಗ್ರರನ್ನು ಮತ್ತು ಅವರ ಬೆಂಬಲಿಗರನ್ನು ಗುರುತಿಸಿ, ಪತ್ತೆಹಚ್ಚಿ, ಶಿಕ್ಷಿಸುವುದು" ಎಂದು ಪೆಹಲ್ಗಾಮ್ ದಾಳಿಯ ಸಂದರ್ಭದಲ್ಲಿ ಹೇಳಿದ್ದರು. ಕೆಲವು ವಾರಗಳ ನಂತರ, ಭಾರತವು ಪಾಕಿಸ್ತಾನ ಮತ್ತು ಪಾಕ್–ಅಕ್ರಮಿತ ಕಾಶ್ಮೀರದಲ್ಲಿರುವ ಉಗ್ರರ ಶಿಬಿರಗಳನ್ನು ಗುರಿಯಾಗಿರಿಸಿಕೊಂಡು 'ಆಪರೇಷನ್ ಸಿಂಧೂರ್' ಅನ್ನು ಆರಂಭಿಸಿತ್ತು.

ಪ್ರಧಾನಿ ಮೋದಿ ಅವರು ಭೂತಾನ್‌ಗೆ ಎರಡು ದಿನಗಳ ಭೇಟಿಯನ್ನು ಮಾಡಿದ್ದಾರೆ. ಈ ಭೇಟಿಯ ಮುಖ್ಯ ಉದ್ದೇಶ, ನೆರೆಹೊರೆಯ ರಾಜ್ಯದ ರಾಜ ಜಿಗ್ಮೆ ಸಿಂಗ್ಯೆ ವಾಂಗ್ಚುಕ್ ಅವರ 70ನೇ ಜನ್ಮದಿನದ ಆಚರಣೆಗಳಲ್ಲಿ ಭಾಗವಹಿಸುವುದಾಗಿದೆ.

**ರಾಜ್ಯದಲ್ಲೂ ಕಟ್ಟೆಚ್ಚರ–**ದೆಹಲಿಯ ಕಾರು ಬಾಂಬ್ ಸ್ಫೋಟದ ಬೆನ್ನಲ್ಲೆ ರಾಜ್ಯದಲ್ಲೂ ಯಾವುದೇ ಅವಘಡಗಳಾಗದಂತೆ ಕಟ್ಟೆಚ್ಚರ ವಹಿಸಲಾಗಿದ್ದು, ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ಭದ್ರತೆಯನ್ನು ಬಿಗಿಗೊಳಿಸಲಾಗಿದೆ.


ವಿಮಾನ, ರೈಲು, ಬಸ್ ನಿಲ್ದಾಣ, ಪ್ರಮುಖ ಮಾರುಕಟ್ಟೆಗಳು, ಮಾಲ್‌ಗಳು, ಐತಿಹಾಸಿಕ ಸ್ಥಳಗಳು ಹಾಗೂ ದೇವಸ್ಥಾನಗಳ ಬಳಿ ಭದ್ರತೆಯನ್ನು ಬಿಗಿಗೊಳಿಸಲಾಗಿದ್ದು, ಹೆಚ್ಚಿನ ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ.

ದೆಹಲಿ ಬಾಂಬ್ ಸ್ಫೋಟದ ಬಗ್ಗೆ ನಿನ್ನೆಯೇ ಆಘಾತ ವ್ಯಕ್ತಪಡಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದಲ್ಲೂ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚನೆ ನೀಡಿದ್ದರು.

ಮುಖ್ಯಮಂತ್ರಿಗಳ ಸೂಚನೆಯಂತೆ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಬಹುತೇಕ ನಗರಗಳಲ್ಲಿ ಪೊಲೀಸ್ ಕಾವಲನ್ನು ಬಿಗಿಗೊಳಿಸಲಾಗಿದ್ದು, ಪ್ರತಿ ಜಿಲ್ಲೆಗಳಿಗೆ ಪ್ರವೇಶಿಸುವ ವಾಹನಗಳ ಪರಿಶೀಲನೆ ನಡೆಸಲಾಗುತ್ತಿದೆ.

ಹಾಗೆಯೇ ಪ್ರವಾಸಿ ಸ್ಥಳ, ದೇವಸ್ಥಾನಗಳಲ್ಲೂ ಹೆಚ್ಚಿನ ಪೊಲೀಸರನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದ್ದು, ಪ್ರತಿಯೊಬ್ಬರ ಮೇಲೂ ನಿಗಾ ವಹಿಸಲಾಗಿದೆ.

# ದಾಳಿಕೋರರಿಗೆ ತಕ್ಕ ಶಾಸ್ತಿ



**ನವದೆಹಲಿ, ನ. 11–** ದೆಹಲಿಯ ಕೆಂಪು ಕೋಟೆಯ ಬಳಿ ಕಾರು ಸ್ಫೋಟ ಪ್ರಕರಣದ ಹಿಂದಿನ ರೂವಾರಿಗಳನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ ಸಿಂಗ್ ಎಚ್ಚರಿಕೆ ನೀಡಿದ್ದಾರೆ.

ದೆಹಲಿ ಸ್ಫೋಟದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ರಕ್ಷಣಾ ಸಚಿವರು, "ದೆಹಲಿ ದುರಂತದಲ್ಲಿ ಪ್ರಾಣ ಕಳೆದುಕೊಂಡುವರ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇನೆ. ತಮ್ಮವರನ್ನು ಕಳೆದುಕೊಂಡ ಕುಟುಂಬಗಳಿಗೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ. ದೇಶದ ಜನರಿಗೆ ನಾನು ಭರವಸೆ ನೀಡುತ್ತೇನೆ ಪ್ರಕರಣದ ಸಮಗ್ರ ತನಿಖೆ ನಡೆಸುತ್ತಿವೆ.

ದುರಂತಕ್ಕೆ ಕಾರಣ ಆದವರನ್ನು ಕಟಕಟೆಗೆ ತಂದು ನಿಲ್ಲಿಸುತ್ತೇವೆ. ಅವರನ್ನು ಯಾವುದೇ ಸಂದರ್ಭ ಬಂದರೂ ಬಿಡುವುದಿಲ್ಲ," ಎಂದು ಖಡಕ್ ಎಚ್ಚರಿಕೆ ಕೊಟ್ಟಿದ್ದಾರೆ

# ಬೆಂಗಳೂರಲ್ಲೂ ಬಿಗಿ ಭದ್ರತೆ:ವ್ಯಾಪಕ ತಪಾಸಣೆ

**ಬೆಂಗಳೂರು,ನ.11–**ನವದೆಹಲಿಯ ಕೆಂಪುಕೋಟೆ ಬಳಿ ಕಾರು ಸ್ಫೋಟ ಹಿನ್ನೆಲೆಯಲ್ಲಿ ನಗರ ಸೇರಿ ರಾಜ್ಯಾದ್ಯಂತ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ನಗರದ ಸೂಕ್ಷ್ಮ,ಅತಿ ಸೂಕ್ಷ್ಮ ಪ್ರದೇಶಗಳು, ಜನಸಂದಣಿಯ ಸ್ಥಳಗಳು ರಾಜ್ಯದ ಪ್ರಮುಖ ನಗರಗಳಲ್ಲಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಿ ಕಟ್ಟೆಚ್ಚರ ವಹಿಸಲಾಗಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳು ಪರಿಸ್ಥಿತಿಯ ಮೇಲೆ ನಿಗಾ ವಹಿಸಿದ್ದಾರೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹೈಅಲರ್ಟ್ ಘೋಷಿಸಲಾಗಿದ್ದು, ಏರ್‌ಪೋರ್ಟ್‌ಗೆ ಬರುವ, ಹೋಗುವ ವಾಹನಗಳ ಮೇಲೆ ಹದ್ದಿನ ಕಣ್ಣಿಡಲಾಗಿದೆ. ಏರ್ಪೋರ್ಟ್ ಭದ್ರತೆಗೆ ಹೆಚ್ಚುವರಿ ಶಸ್ತ್ರ ಸಜ್ಜಿತ ಸಿಐಎಸ್‌ಎಫ್ ನಿಯೋಜನೆ ಜೊತೆಗೆ ವಿಮಾನ ನಿಲ್ದಾಣದ ಒಳ ಮತ್ತು ಹೊರ ಆವರಣದಲ್ಲಿ ಪ್ಯಾಟ್ರೋಲಿಂಗ್ ಗಸ್ತು ಹೆಚ್ಚಳ ಮಾಡಲಾಗಿದೆ. ಏರ್‌ಪೋರ್ಟ್‌ಗೆ ಬರುವ ಪ್ರಯಾಣಿಕರು, ಸಿಬ್ಬಂದಿಯ ತಪಾಸಣೆ ಮಾಡಲಾಗುತ್ತಿದೆ. ವಾಹನ ನಿಲುಗಡೆ ಸೇರಿ ಎಲ್ಲಡೆ ಭದ್ರತಾ ಪಡೆ ಕಟ್ಟೆಚ್ಚರವಹಿಸಲಾಗಿದೆ.

ಜನನಿಬಿಡ ಸ್ಥಳಗಳಾದ ಮೆಜೆಸ್ಟಿಕ್ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಮೆಟ್ರೋ ನಿಲ್ದಾಣ ಬಳಿ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದಾರೆ. ರೈಲ್ವೆ ನಿಲ್ದಾಣಗಳಲ್ಲಿ ಪ್ರಯಾಣಿಕರ ತಪಾಸಣೆ ಜೊತೆಗೆ ಶ್ವಾನದಳದಿಂದ ರೈಲು ನಿಲ್ದಾಣ ಸುತ್ತಮುತ್ತ ಪರಿಶೀಲನೆ ನಡೆಸಲಾಗಿದೆ. ಮೆಜೆಸ್ಟಿಕ್ ಸುತ್ತಮುತ್ತ ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದ್ದು, ಬಸ್ ನಿಲ್ದಾಣ, ರೈಲ್ವೆನಿಲ್ದಾಣದಲ್ಲಿ ಹೆಚ್ಚುವರಿ ಪೊಲೀಸರನ್ನು ನೇಮಿಸಲಾಗಿದೆ.

ನಗರದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಲಾಗಿದ್ದು, ನಗರ ಪೊಲೀಸ್ ಆಯುಕ್ತರ ಸೂಚನೆ ಮೇರೆಗೆ



ಬೆಂಗಳೂರಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ದೆಹಲಿಯ ಸ್ಫೋಟ ಪ್ರಕರಣವನ್ನು ರಾಜ್ಯ ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ತೀವ್ರ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚನೆ ನೀಡಿದ್ದೇನೆ. ಜನನಿಬಿಡ ಸ್ಥಳಗಳಲ್ಲಿ ಭದ್ರತೆಯನ್ನು ಹೆಚ್ಚಿಸಿ, ಜನರ ಸುರಕ್ಷತೆಗೆ ಆದ್ಯತೆ ನೀಡುವಂತೆ ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಯಾವುದೇ ತರನಾದ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಕೂಡ ಪೊಲೀಸ್ ಇಲಾಖೆಯ ಜೊತೆ ಸಹಕರಿಸಬೇಕು ಎಂದು ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ.

# ಮತದಾನದಲ್ಲಿ ಹೊಸ ದಾಖಲೆ ಬರೆಯಿರಿ ಬಿಹಾರಿಗಳಿಗೆ ಮೋದಿ ಮನವಿ

**ನವದೆಹಲಿ, ನ. 11–** ಬಿಹಾರದ ಮತದಾರರು ತಮ್ಮ ಮತದಾನದ ಹಕ್ಕನ್ನು ಉತ್ಸಾಹದಿಂದ ಚಲಾಯಿಸಿ, ರಾಜ್ಯದ ಎರಡನೇ ಮತ್ತು ಅಂತಿಮ ಹಂತದ ವಿಧಾನಸಭಾ ಚುನಾವಣೆಯಲ್ಲಿ ಹೊಸ ದಾಖಲೆಯನ್ನು ಸ್ಥಾಪಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಬಿಹಾರಿಗಳಿಗೆ ಮನವಿ ಮಾಡಿದ್ದಾರೆ.

ಬಿಹಾರದ 122 ಕ್ಷೇತ್ರಗಳಿಗೆ ಇಂದು ಬೆಳಿಗ್ಗೆ ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ಭಾರೀ ಕುತೂಹಲ ಮೂಡಿಸಿದ ವಿಧಾನಸಭಾ ಚುನಾವಣೆಯಲ್ಲಿ ಮತದಾನ ಪ್ರಾರಂಭವಾಯಿತು. ಇಂದು, ಬಿಹಾರ ವಿಧಾನಸಭಾ ಚುನಾವಣೆಗೆ ಎರಡನೇ ಮತ್ತು ಅಂತಿಮ ಹಂತದ ಮತದಾನ ನಡೆಯುತ್ತಿದೆ. ಎಲ್ಲಾ ಮತದಾರರು ಉತ್ಸಾಹದಿಂದ ಭಾಗವಹಿಸಿ ಹೊಸ ಮತದಾನದ ದಾಖಲೆಯನ್ನು ಸ್ಥಾಪಿಸಬೇಕೆಂದು ನಾನು ಒತ್ತಾಯಿಸುತ್ತೇನೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ಮೊದಲ ಬಾರಿಗೆ ಮತ ಚಲಾಯಿಸುತ್ತಿರುವ ರಾಜ್ಯದ ನನ್ನ ಯುವ ಸ್ನೇಹಿತರು ತಮ್ಮ ಮತಗಳನ್ನು ಚಲಾಯಿಸುವುದು ಮಾತ್ರವಲ್ಲದೆ ಇತರರನ್ನು ಹಾಗೆ ಮಾಡಲು ಪ್ರೇರೇಪಿಸಬೇಕೆಂದು ನಾನು ವಿಶೇಷವಾಗಿ ಒತ್ತಾಯಿಸುತ್ತೇನೆ ಎಂದು ಪ್ರಧಾನಿ ಹೇಳಿದರು. ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ



121 ಕ್ಷೇತ್ರಗಳಾದ್ಯಂತ ನಡೆದ ಮತದಾನದಲ್ಲಿ ಶೇ. 65 ಕ್ಕಿಂತ ಹೆಚ್ಚು ಮತದಾನ ದಾಖಲಾಗಿದ್ದು, ಇದುವರೆಗಿನ ಅತ್ಯಧಿಕ ಮತದಾನವಾಗಿದೆ.

ಮತ ಎಣಿಕೆ ನವೆಂಬರ್ 14 ರಂದು ನಡೆಯಲಿದೆ.ಮತ ಎಣಿಕೆ ಬೆಳಿಗ್ಗೆ 7 ಗಂಟೆಗೆ ಪ್ರಾರಂಭವಾಗಿ ಸಂಜೆ 5 ಗಂಟೆಯವರೆಗೆ ನಡೆಯಲಿದೆ.ಈ ಹಂತದಲ್ಲಿ, ನಿತೀಶ್ ಕುಮಾರ್ ಸರ್ಕಾರದ ಹಲವಾರು ಸಚಿವರು ಸೇರಿದಂತೆ 1,302 ಅಭ್ಯರ್ಥಿಗಳ ಚುನಾವಣಾ ಭವಿಷ್ಯ ಮುದ್ರೆಯಾಗಲಿದೆ.

# ಕೆಂಪು ಕೋಟೆಯ ಬಳಿ ಸ್ಫೋಟ : ಪಿತೂರಿಗಾರರಿಗೆ ತಕ್ಕ ಪಾಠ ಕಲಿಸದೇ ಬಿಡಲ್ಲ ಎಂದ ಪ್ರಧಾನಿ ಮೋದಿ

**ನವದೆಹಲಿ,ನ.11–** ರಾಜಧಾನಿ ದೆಹಲಿಯ ಐತಿಹಾಸಿಕ ಕೆಂಪು ಕೋಟೆ ಬಳಿ ಸಂಭವಿಸಿದ ಕಾರ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಭಾಗಿಯಾದ ಪಿತೂರಿಗಾರರಿಗೆ ತಕ್ಕಪಾಠ ಕಲಿಸದೆ ಬಿಡುವುದಿಲ್ಲ ಎಂದು ಪ್ರಧಾನಿ ನರೇಂದ್ರಮೋದಿ ಎಚ್ಚರಿಸಿದ್ದಾರೆ. ಭೂತಾನ್ ಪ್ರವಾಸದಲ್ಲಿರುವ ಪ್ರಧಾನಿಗಳು, ಮೊದಲು ಘಟನೆಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಸಂತಾಪ ಸೂಚಿಸಿ ಗಾಯಗೊಂಡವರು ಬೇಗ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

ಘಟನೆಯಿಂದ ಇಡೀ ದೇಶದ ಜನತೆ ದಿಗ್ಭ್ರಾಂತಗೊಂಡಿದೆ ಎಂಬುದನ್ನು ನಾನು ಬಲ್ಲೆ. ಯಾವುದೇ ಕಾರಣಕ್ಕೂ ದೇಶದ ಜನತೆ ಆತಂಕಕ್ಕೆ ಒಳಗಾಗಬಾರದು. ನಿಮ ಹಿತಕಾಪಾಡಲು ನಾವು ಬದ್ಧರಾಗಿದ್ದೇವೆ. ವದಂತಿಗಳಿಗೆ ಕಿವಿಗೊಡಬಾರದೆಂದು ಮನವಿ ಮಾಡಿದರು.ಘಟನೆ ನಡೆದ ಮರುಕ್ಷಣವೇ ನಾನು ತನಿಖಾ ಸಂಸ್ಥೆಗಳು, ಭದ್ರತಾ ಮುಖ್ಯಸ್ಥರು ಸೇರಿದಂತೆ ಮತ್ತಿತರ ಜೊತೆ ಮಾತನಾಡಿದ್ದೇನೆ. ಪ್ರತಿಯೊಂದು ವಿವರವನ್ನು ಪಡೆದುಕೊಂಡಿದ್ದೇನೆ. ನಮ ಸೇನಾಪಡೆ ಮತ್ತು ತನಿಖಾ ಸಂಸ್ಥೆಗಳು ಪ್ರಕರಣದ ಬಗ್ಗೆ ಆಳವಾದ ತನಿಖೆಯನ್ನು ನಡೆಸುತ್ತೆವೆ ಎಂದು ಹೇಳಿದರು.

ನಮ ತನಿಖಾ ಸಂಸ್ಥೆಗಳು ಈ ಪಿತೂರಿಯ ಆಳವನ್ನು ಭೇದಿಸುತ್ತವೆ. ಇದರ ಹಿಂದಿನ ಪಿತೂರಿಗಾರರನ್ನು ಬಿಡುವುದಿಲ್ಲ. ಎಲ್ಲ ಹೊಣೆಗಾರರನ್ನು ನ್ಯಾಯದ ಕಟಕಟೆಗೆ ನಿಲ್ಲುಸುತ್ತೆವೆ.



ಇಂದು ನಾನು ಭಾರವಾದ ಹೃದಯದಿಂದ ಇಲ್ಲಿಗೆ ಬಂದಿದ್ದೇನೆ.

ನಿನ್ನೆ ಸಂಜೆ ದೆಹಲಿಯಲ್ಲಿ ನಡೆದ ಭೀಕರ ಘಟನೆ ಎಲ್ಲರನ್ನೂ ದುಃಖಿಸಿದೆ. ಸಂತ್ರಸ್ತ ಕುಟುಂಬಗಳ ದುಃಖ ನನಗೆ ಅರ್ಥವಾಗಿದೆ. ಇಂದು ಇಡೀ ರಾಷ್ಟ್ರವು ಅವರೊಂದಿಗೆ ನಿಂತಿದೆ ಎಂದು ಭಾವುಕರಾಗಿ ನುಡಿದರು. ಘಟನೆಯ ತನಿಖೆ ನಡೆಸುತ್ತಿರುವ ಎಲ್ಲಾ ಮುಖ್ಯಸ್ಥರ ಜೊತೆ ರಾತ್ರಿ ಇಡೀ ಸಂಪರ್ಕದಲ್ಲಿದ್ದೇನೆ ಎಂದು ಹೇಳಿದರು.

# ಕೆಂಪುಕೋಟೆಗೆ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧ

**ನವದೆಹಲಿ,ನ.11–** ಐತಿಹಾಸಿಕ ಕೆಂಪುಕೋಟೆ ಬಳಿ ಕಾರ್‌ಬಾಂಬ್ ಸ್ಫೋಟಗೊಂಡ ಹಿನ್ನೆಲೆಯಲ್ಲಿ ಮೂರು ದಿನಗಳ ಕಾಲ ಸಾರ್ವಜನಿಕರ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸಾರ್ವಜನಿಕರ ಪ್ರವೇಶಕ್ಕೆ ದೆಹಲಿ ಆಯುಕ್ತರು ನಿರ್ಬಂಧ ವಿಧಿಸಿ ಆದೇಶ ಹೊರಡಿಸಿದ್ದಾರೆ.

ಪ್ರತಿದಿನ ಕೆಂಪುಕೋಟೆ ವೀಕ್ಷಣೆ ಮಾಡಲು ಸಾವಿರಾರು ಮಂದಿ ಆಗಮಿಸುತ್ತಾರೆ. ಅದರಲ್ಲೂ ವಾರದ ಕೊನೆಯ ದಿನವಾದ ಶನಿವಾರ, ಭಾನುವಾರ ಭಾರೀ ಸಂಖ್ಯೆಯಲ್ಲಿ ಬರುತ್ತಾರೆ. ಸೋಮವಾರ ಸಂಜೆ ಕೆಂಪುಕೋಟೆ ಸಮೀಪದ ಮೆಟ್ರೊ ರೈಲ್ವೆ



ನಿಲ್ದಾಣದ ಬಳಿ ಹುಂಡೈ ಕಾರು ಸ್ಫೋಟಗೊಂಡು 9 ಮಂದಿ ಸಾವನ್ನಪ್ಪಿ ಹಲವಾರು ಮಂದಿ ಗಾಯಗೊಂಡಿದ್ದರು. ಹೀಗಾಗಿ ಕೆಂಪುಕೋಟೆ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ.

## ಪ್ರಶಸ್ತಿ ಪುರಸ್ಕೃತೆ ರತ್ನಮ್ಮ ದೇಸಾಯಿ ಅವರಿಗೆ ಸಿರವಾರದಲ್ಲಿ ಸನ್ಮಾನ



**ಯುವ ಮಾರ್ಗ ಸುದ್ದಿ**

**ಸಿರವಾರ,ನ.11–** ಕನ್ನಡ ರಂಗಭೂಮಿಗೆ ಸಲ್ಲಿಸಿದ ಮಹೋನ್ನತ ಸೇವೆಗಾಗಿ ರಾಜ್ಯೋತ್ಸವ ಪ್ರಶಸ್ತಿ ಪಡೆದಿರುವ ಸಿರವಾರದ ಹೆಮ್ಮೆಯ ರಂಗಕಲಾವಿದೆ ರತ್ನಮ್ಮ ದೇಸಾಯಿ ಅವರನ್ನು ಇಲ್ಲಿನ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಸುಮಾರು 50ಕ್ಕೂ ಹೆಚ್ಚು ನಾಟಕಗಳಲ್ಲಿ ನಟಿಸಿ, ಸಿರವಾರದ ಕೀರ್ತಿಯನ್ನು ರಾಜ್ಯ ಮಟ್ಟದಲ್ಲಿ ರಾರಾಜಿಸಿದ ಅವರ ಸಾಧನೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಈ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಮಾಜಿ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಟಿ. ಬಸವರಾಜ್, ರಮೇಶ್ ದರ್ಶನ್ ಕರ್, ಬಸವರಾಜ್ ನಂದ ರಡ್ಡಿ, ಹಾಲಿ ಕ.ಸ.ಪ. ಅಧ್ಯಕ್ಷರು ಮೌನೇಶ್ ಹಿರೇಹಣಗಿ, ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಅಧ್ಯಕ್ಷರು ರಾಘವೇಂದ್ರ ಖಜಾನಗೌಡ, ಡಾ. ಯಮನೂರ, ಪ್ರಕಾಶ್ ಪಾಟೀಲ್, ಎಂ. ಗುಂಡಪ್ಪ, ವೆಂಕಟರಡ್ಡಿ ಬಲ್ಕಲ್, ಅಮರೇಶ್ ದಿನ್ನಿ, ಸೂರಿ ಹುಸೇನಪ್ಪ ನಾಯಕ, ಅನುರಾಧ ಮೇಡಂ, ಶಾಂತಪ್ಪ ಪಿತಗಲ್ ಹಾಗೂ ಊರಿನ ಅನೇಕ ನಾಗರಿಕರು ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ರತ್ನಮ್ಮ ದೇಸಾಯಿ ಅವರು, ರಂಗಭೂಮಿಯ ಕಲೆಯು ತಮ್ಮ ಜೀವನದ ಉಸಿರಾಗಿದ್ದು, ಸ್ಥಳೀಯ ಕಲಾವಿದರನ್ನು ಹಾಗೂ ಕಲೆಯ ಆಸಕ್ತಿಯುಳ್ಳವರನ್ನು ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ನುಡಿದರು. ಕ.ಸ.ಪ. ಸಿರವಾರ ವತಿಯಿಂದ ನೀಡಿದ ಗೌರವಕ್ಕೆ ಅವರು ಧನ್ಯವಾದ ಸಲ್ಲಿಸಿದರು.

## ಮನೆ ಬೀಗ ಮುರಿದು 1.67 ಲಕ್ಷ ರೂ.ಮೌಲ್ಯದ ಚಿನ್ನ ಬೆಳ್ಳಿ ಆಭರಣ ಕಳವು

**ಕಲಬುರಗಿ,ನ.11–**ಮನೆ ಬೀಗ ಮುರಿದು 1.67 ಲಕ್ಷ ರೂ.ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣ ಕಳವು ಮಾಡಿರುವ ಘಟನೆ ಇಲ್ಲಿನ ದೇವಿ ನಗರದಲ್ಲಿ ನಡೆದಿದೆ.

ಖಾಸಗಿ ಶಾಲೆಯಲ್ಲಿ ಶಿಕ್ಷಕರಾಗಿರುವ ಗುರುಬಸಯ್ಯ ಹಿರೇಮಠ ಅವರ ಮನೆ ಬೀಗ ಮುರಿದು ಕಳ್ಳರು 25 ಸಾವಿರ 5 ಗ್ರಾಂ.ತಾಳಿಚೈನ, 25 ಸಾವಿರ ರೂ.ಮೌಲ್ಯದ 5 ಗ್ರಾಂ.ಲಾಕೆಟ್, 40 ಸಾವಿರ ರೂ.ಮೌಲ್ಯದ 4 ಗ್ರಾಂ.ನ ಬಂಗಾರದ ಕಿವಿಯೋಲೆ, 10 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ರಿಂಗ್, 10 ಸಾವಿರ ರೂ.ಮೌಲ್ಯದ 2 ಗ್ರಾಂ. ಬಂಗಾರದ ಲಾಕೆಟ್ ಪೆಂಡೆಂಟ್, 20 ಸಾವಿರ ರೂ.ಮೌಲ್ಯದ 20 ಗ್ರಾಂ.ನ ಗಣೇಶ ಮೂರ್ತಿ, 1200 ರೂ.ಮೌಲ್ಯದ 20 ಗ್ರಾಂ.ನ ಬೆಳ್ಳಿ ಬಟ್ಟಲು, 25 ಸಾವಿರ ರೂ.ಮೌಲ್ಯದ 50 ಗ್ರಾಂ.ನ ಬೆಳ್ಳಿ ಖಡಗ, ಪ್ಲೇಟ್ ಸೇರಿ 1.67 ಲಕ್ಷ ರೂ.ಮೌಲ್ಯದ ಚಿನ್ನ, ಬೆಳ್ಳಿ ಆಭರಣ ಕಳವು ಮಾಡಿದ್ದಾರೆ.

ಗುರುಬಸಯ್ಯ ಹಿರೇಮಠ ಅವರು ಮನೆಗೆ ಬೀಗ ಹಾಕಿಕೊಂಡು ಶಾಲೆಗೆ ಮತ್ತು ಅವರ ಪತ್ನಿ ಗೆಳತಿಯ ಮಗಳ ಮದುವೆ ಕಾರ್ಯಕ್ರಮಕ್ಕೆಂದು ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.

ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ರೇಣುಕಾ ಯಲ್ಲಮ್ಮ ದೇವಿ ಉತ್ಸವ ಮೂರ್ತಿಯ ಭವ್ಯ ಮೆರವಣಿಗೆ



**ಕಲಬುರಗಿ,ನ.11–**ನಗರದ ಗಂಗಾ ನಗರದಲ್ಲಿ ರೇಣುಕಾ ಯಲ್ಲಮ್ಮ ದೇವಿ ತರುಣ ಸಂಘ ಹಾಗೂ ನಿಜ ಶರಣ ಅಂಬಿಗರ ಚೌಡಯ್ಯ ಜೀರ್ಣೋದ್ಧಾರ ಸಂಘದ ವತಿಯಿಂದ ರೇಣುಕಾ ಯಲ್ಲಮ್ಮ ದೇವಿ ಹಾಗೂ ಪರಶುರಾಮ ಮಹಾಕಾರ್ಯ ಪೂಜೆ ಅಂಗವಾಗಿ ಇಂದು ಬೆಳಿಗ್ಗೆ ಕೆರೆ ಯಲ್ಲಮ್ಮ ದೇವಸ್ಥಾನದಿಂದ ಗಂಗಾ ನಗರದ ರೇಣುಕಾ ಯಲ್ಲಮ್ಮ ದೇವಿ ಮಂದಿರದವರೆಗೆ ಉತ್ಸವ ಮೂರ್ತಿಯ ಮೆರವಣಿಗೆ 101 ಮುತ್ತೈದೆಯರ ಕಳಸ, ಭಾಜ ಭಜಂತ್ರಿ, ಡೊಳ್ಳು, ಹಲಗೆ ವಾದನಗಳೊಂದಿಗೆ ವೈಭವದಿಂದ ಜರುಗಿತು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಅವರು ಉತ್ಸವ ಮೂರ್ತಿಯ ಮೆರವಣಿಗೆಗೆ ಚಾಲನೆ ನೀಡಿದರು. ಮಹಾನಗರ ಪಾಲಿಕೆ ಮಾಜಿ ಸದಸ್ಯ ಪ್ರಕಾಶ ಬೆನಕನಹಳ್ಳಿ, ರಾಮರಾವ ಸುಲ್ತಾನಪೂರ, ಸುರೇಶ ಬೆನಕನಹಳ್ಳಿ, ರೇಣುಕಾ ಯಲ್ಲಮ್ಮ ದೇವಿ ತರುಣ ಸಂಘದ ಅಧ್ಯಕ್ಷ ಅನೀಲ ಕೂಡಿ, ಉಪಾಧ್ಯಕ್ಷ ರಮೇಶ ಬಾದನಳ್ಳಿ, ಸಂದೇಶ ಕಮಕನೂರ, ಹುಲಿಯಪ್ಪ ಬಟಗೇರಿ, ಶಿವಕುಮಾರ ಚೌದ್ರಿ, ಶ್ಯಾಮ ಕೋಬಾಳ, ರವಿಕುಮಾರ ಬೊಮ್ಮನಳ್ಳಿ, ಶ್ರೀನಿವಾಸ ಕೋಬಾಳ, ಭೀರಲಿಂಗ ಪೂಜಾರಿ, ಸುರೇಶ ಕೂಡಿ, ಸಂತೋಷ ಹೊಳಗೇರಿ, ಸೇರಿದಂತೆ ಮತ್ತಿತರರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

## ಸೂಗೂರೇಶ್ವರ ಗುಡಿಯವರಿಗೆ ಕನ್ನಡ ಸೇನೆ ಕರ್ನಾಟಕ ಜಿಲ್ಲಾ ಮತ್ತು ತಾಲೂಕು ಘಟಕದಿಂದ ಸನ್ಮಾನ

**ಯುವ ಮಾರ್ಗ ಸುದ್ದಿ**

**ಅರಕೇರಾ,ನ.11–**ರಾಯಚೂರು ಜಿಲ್ಲೆಯ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕಕ್ಕೆ ನ.9ರಂದು ನಡೆದ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಸೂಗೂರೇಶ್ವರ ಎಸ್ ಗುಡಿ ವರದಿಗಾರರು ಅರಕೇರಾ ಗೆಲುವು ಸಾಧಿಸಿ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘ ರಾಯಚೂರು ಘಟಕಕ್ಕೆ ಆಯ್ಕೆಯಾ ಗಿರುವದಕ್ಕೆ

ಕನ್ನಡ ಸೇನೆ ಕರ್ನಾಟಕ ಜಿಲ್ಲಾ ಘಟಕ ಹಾಗೂ ಅರಕೇರಾ ತಾಲೂಕು ವತಿಯಿಂದ ಅರಕೇರಾ ಪಟ್ಟಣದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಸಂದರ್ಭದಲ್ಲಿ ಎಂ.ಬಸವರಾಜ ಜಿಲ್ಲಾ ಅಧ್ಯಕ್ಷರು ಹನುಮೇಶ ನಾಯಕ ಕಾರ್ಯಾಧ್ಯಕ್ಷ ಗೋವಿಂದ ಚೌವ್ಹಾಣ್ ಉಪಾಧ್ಯಕ್ಷರು



ಮೈಹಿಬೂಬ ಬಡಿಗೇರ ಅರಕೇರಾ ತಾಲೂಕು ಅಧ್ಯಕ್ಷರು. ಜಿ.ಹನುಮಂತ್ರಾಯನಾಯಕ ಪ್ರಧಾನ ಕಾರ್ಯದರ್ಶಿ. ನಿತ್ಯಾನಂದ ಸ್ವಾಮಿ ಉಪಾಧ್ಯಕ್ಷ ರು ಬಸವರಾಜ ಪೂಜಾರಿ ಯುವ ಘಟಕದ ಅಧ್ಯಕ್ಷರು. ಶಿವುಗೇನಿ ಗುಜಪ್ ಅಧ್ಯಕ್ಷರು ಅಕ್ಬರ್ ಉಪಾಧ್ಯಕ್ಷರು ಚಾಂದ ಪಾಷಾ ಮುಂತಾದವರು ಉಪಸ್ಥಿತರಿದ್ದರು

## ನವೆಂಬರ್ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

**ರಾಯಚೂರು,ನ.11–** ಇಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ನವೆಂಬರ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿ ಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಸೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನಕದಾಸರ ಜಯಂತಿ : ವಿಜೇತರಿಗೆ ವಶಿಷ್ಠಧಾಮದಿಂದ ಬಹುಮಾನ ವಿತರಣೆ

**ಯುವ ಮಾರ್ಗ ಸುದ್ದಿ**



**ಸಿಂಧನೂರು,ನ.11–**ಇಂದಿನ ಶಿಕ್ಷಣವು ಕೇವಲ ವಿದ್ಯಾರ್ಥಿಗಳಿಗೆ ಹಣ ಸಂಪಾದನೆ ಮಾಡುವ ಶಿಕ್ಷಣ ಕೊಡುತ್ತಿವೆ. ಮಕ್ಕಳ ಮನೋವಿಕಾಸ ಕುಂಠಿತವಾಗುತ್ತಿದೆ. ಇದರಿಂದಾಗಿ ಸಂಗೀತ ಸಾಹಿತ್ಯ ಸದಭಿರು ಚಿಯ ಶಿಕ್ಷಣದ ಕೊರತೆಯುಂಟಾಗಿದೆ. ವೈಜ್ಞಾನಿಕಯುಗದ ನಾಗಾಲೋಟದಲ್ಲಿ ನೆಮ್ಮದಿಯ ಮನೋವಿಕಾಸಕ್ಕಿಂತ ಹಣ ಸಂಪಾದನೆ ಮಾಡುವುದೇ ಶಿಕ್ಷಣದ ಮುಖ್ಯ ಗುರಿಯಾಗಿದೆ ಎಂದು ವಶಿಷ್ಠಧಾಮ ಅಧ್ಯಕ್ಷ ರಾದ ಭೀಮಸೇನಾಚಾರ್ಯ ನವಲಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಸಿಂಧನೂರು ನಗರದ ಉಪ್ಪಾರವಾಡಿ ಗುರುಸಿದ್ದಯ್ಯ ಮಠ ಸರಕಾರಿ ಶಾಲೆಯಲ್ಲಿ ವಶಿಷ್ಠಧಾಮ ಸೇವಾ ಟ್ರಸ್ಟ್ ವತಿಯಿಂದ ಶಾಲಾ ಮಕ್ಕಳಿಗೆ ಕನಕದಾಸರ ಜಯಂತಿಯ ಪ್ರಯುಕ್ತ ಭಾಷಣ ಸ್ಪರ್ಧೆ, ಪ್ರಬಂಧ ಸ್ಪರ್ಧೆಯ ಬಹುಮಾನ ವಿತರಣಾ ಕಾರ್ಯಕ್ರಮದ ಆಯೋಜಕರಾಗಿ ಮಾತನಾಡಿದ ಅವರು

ಸರಕಾರಿ ಶಾಲಾ ಮಕ್ಕಳಲ್ಲಿ ಕಲಿಯುವ ಆಸಕ್ತಿಯ ಪ್ರೇರಣಾ ದಾಯಕ ಕಾರ್ಯಕ್ರಮಗಳು ನಿರಂತರವಾಗಿ ಜರುಗಬೇಕು. ಅನೇಕ ರೀತಿಯ ಸೌಲಭ್ಯ ವಂಚಿತರಾಗಿರುವ ಸರಕಾರಿ ಶಾಲಾ ಮಕ್ಕಳು ವಿಶೇಷ ಪ್ರತಿಭೆಗಳಾಗಿ ಸಮಾಜದ ಮುಖ್ಯವಾಹಿನಿ ಆಗಮಿಸಬೇಕು ಎಂದರು.

ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಹುಲಿಗೆಮ್ಮ ಮಾತನಾಡಿ ನಮ್ಮ ಶಾಲೆಯಲ್ಲಿ ಅನೇಕ ಕಾರ್ಯಕ್ರಮಗಳು ದಾನಿಗಳ ಸಹಕಾರದಿಂದ ಜರುಗುತ್ತಲಿವೆ ಅಂದರು. ಅತಿಥಿಗಳಾಗಿ ಆಗಮಿಸಿದ್ದ ಶೋಭಾ ನವಲಿ ಮಾತನಾಡಿ, ಚಿಕ್ಕ ಮಕ್ಕಳು ಬಿಳಿಯ ಹಾಳೆಯಂತೆ ಅವರ ಮನಸ್ಸಿನಲ್ಲಿ ಸಂಗೀತ ಸಾಹಿತ್ಯ ಕ್ರೀಡೆಗಳು ಮುಂತಾದ ಯಾವದೇ ವಿಷಯವನ್ನು ಹಾಕಿದರೂ ಗ್ರಹಿಸುವ ಶಕ್ತಿ ಅವರಲ್ಲಿ ವಿಶೇಷವಾಗಿರುತ್ತದೆ. ಬಾಲ್ಯದಲ್ಲಿಯೇ ಮಕ್ಕಳಿಗೆ ವಿಶೇಷ ಜ್ಞಾನವಿ ರುತ್ತದೆ ಎಂದು ವಶಿಷ್ಠಧಾಮ ಸದಸ್ಯರಾದ ಎಂದು ಹೇಳಿದರು.

ಶಾಲೆಯ ಮುಖ್ಯಗುರುಗಳಾದ ಸಾವಿತ್ರಿ ದಿಕ್ಷೀತ ಮಾತನಾಡಿ ನಮ್ಮ ಶಾಲೆಯು ಸರಕಾರದಿಂದ ಹಾಗೂ ದಾನಿಗಳ ಸಹಾಯ ಸಹಕಾರದಿಂದ ಮಕ್ಕಳಿಗೆ ಅನೇಕ ರೀತಿಯ ಸೌಲಭ್ಯಗಳು ಉಪಯೋಗಿಸಿಕೊಂಡು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣದ ಜೊತೆಗೆ ಮನೋವಿಕಾಸದ ಆಟ ಪಾಠಗಳು ಜರುಗು ತ್ತಲಿವೆ ಎಂದರು.

ಈ ಸಂದರ್ಭದಲ್ಲಿ ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಶಾಲೆಯ ಎಲ್ಲಾ ಮಕ್ಕಳಿಗೂ ವಶಿಷ್ಠಧಾಮ ಸೇವಾ ಟ್ರಸ್ಟ್ ವತಿಯಿಂದ ಪ್ರೋತ್ಸಾಹದಾಯಕವಾಗಿ ನೋಟ್‌ಬುಕ್ ಪೆನ್ ವಿತರಿಸಲಾಯಿತು. ಅಂಜನಾ ನವಲಿ ದಾಸವಾಣಿ ಗೀತೆ ಹಾಡಿದರು. ವಶಿಷ್ಠಧಾಮ ಸೇವಾ ಟ್ರಸ್ಟ್‌ನ ಉಪಾಧ್ಯಕ್ಷರಾದ ಸತ್ಯನಾರಾಯಣಾಚಾರ್ಯ ನವಲಿ ಶಾಲೆಯ ಸಿಬ್ಬಂದಿವರ್ಗ ಎಸ್.ಡಿ.ಎಮ್.ಸಿ ಸದಸ್ಯರು ಉಪಸ್ಥಿತರಿದ್ದರು

## ಇಪಿಎಫ್‌ಓದಿಂದ ಉದ್ಯೋಗಿಗಳ ನೋಂದಣಿ ಅಭಿಯಾನ–2025 ಆರಂಭ

**ರಾಯಚೂರು,ನ.11–** ನೌಕರರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್‌ಒ) ವತಿಯಿಂದ ಉದ್ಯೋಗಿಗಳ ನೋಂದಣಿ ಅಭಿಯಾನ–2025 ಪ್ರಾರಂಭಿಸಲಾಗಿದ್ದು, ನೌಕರರು ಸ್ವಯಂ ಪ್ರೇರಿತವಾಗಿ ನೋಂ ದಾಯಿಸಲು ಉದ್ಯೋಗದಾತರಿಗೆ ಅವಕಾಶ ನೀಡಲಾಗಿದೆ ಎಂದು ನೌಕರರ ಭವಿಷ್ಯ ನಿಧಿ ಸಂಸ್ಥೆಯ ರಾಯಚೂರಿನ ಪ್ರಾದೇಶಿಕ ಕಚೇರಿಯ ಆಯುಕ್ತರು ತಿಳಿಸಿದ್ದಾರೆ.ಈ ಅಭಿಯಾನದ ಉದ್ದೇಶವು 1ನೇ ಜುಲೈ 2017 ರಿಂದ 2025ರ ಅಕ್ಟೋಬರ್ 31ರವರೆಗೆ ನೌಕರರ ಭವಿಷ್ಯ ನಿಧಿ ಹಾಗೂ ಇತರ ವಿಧೇಯ ಕಾಯ್ದೆ, 1952 ಅಡಿಯಲ್ಲಿ ನೋಂದ ಣಿಯಾಗದ ನೌಕರರು ಸ್ವಯಂ ಪ್ರೇರಿತವಾಗಿ ನೋಂದಾಯಿಸಲು ಉದ್ಯೋಗದಾತರಿಗೆ 2026ರ ಏಪ್ರಿಲ್ 30ರವರೆಗೆ ನೋಂದಣಿಗೆ ಅವಕಾಶ ನೀಡಲಾಗಿದೆ.ಎಲ್ಲಾ ಅರ್ಹ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಪ್ರಯೋಜನಗಳನ್ನು ವಿಸ್ತರಿಸುವುದು ಮತ್ತು ಸಂಸ್ಥೆಗಳು ಸ್ವಯಂ ಪ್ರೇರಿತವಾಗಿ ಮುಂದೆ ಬಂದು ತಮ್ಮ ನೌಕರರ ಸದಸ್ಯತ್ವವನ್ನು ನಿಯಮಿತಗೊಳಿಸಲು ಪ್ರೋತ್ಸಾಹಿಸುವು ದಾಗಿದೆ.ಈ ಯೋಜನೆಯಡಿ, ಉದ್ಯೋಗದಾ ತರು ನಿಗದಿತ ಅವಧಿಯೊ ಳಗೆ ನೋಂದಾಯಿಸದ ನೌಕರರನ್ನು ಬಹಿರಂಗಪಡಿಸಿ ಸಂಬಂಧಿ ತ ಭವಿಷ್ಯ ನಿಧಿ ಕೊಡುಗೆಗಳನ್ನು ಪಾವತಿಸಬಹುದು ಅಭಿಯಾನದ ಸಮಯದಲ್ಲಿ ಹಾನಿ ಮತ್ತು ದಂಡದ ಮೇಲಿನ ಏಕಕಾಲಿನ ಸಡಿಲಿಕೆ ನೀಡಲಾಗುತ್ತದೆ. ಇದರಿಂದ ಸರಳ ಹಾಗೂ ಪಾರದರ್ಶಕ ನೋಂದಣಿ ಪ್ರಕ್ರಿಯೆ ಖಚಿತವಾಗುತ್ತದೆ.ಈ ಉಪಕ್ರಮದ ಮೂಲಕ ಇಪಿಎಫ್‌ಒ ಎಲ್ಲ ಕಾರ್ಮಿಕರಿಗೂ ವಿಶ್ವ ವ್ಯಾಪಕ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ಒದಗಿಸುವುದು ಹಾಗೂ ಅವರ ಆರ್ಥಿಕ ಮತ್ತು ಸಾಮಾಜಿಕ ಕಲ್ಯಾಣವನ್ನು ಖಾತ್ರಿಪಡಿಸುವ ಸರ್ಕಾರದ ದೃಷ್ಟಿಕೋಣವನ್ನು ಬಲಪಡಿಸಲು ಪ್ರಯತ್ನಿಸುತ್ತಿದ್ದು, ಎಲ್ಲಾ ಸಂಸ್ಥೆಗಳಿಗೂ ಈ ಅವಕಾಶವನ್ನು ಉಪಯೋಗಿಸಿಕೊಂಡು ನಿಗದಿತ ಅವಧಿಯೊಳಗೆ ತಮ್ಮ ನೌಕರರನ್ನು ನೋಂದಾಯಿಸ ಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಗಳು ಮತ್ತು ಸದಸ್ಯರು www.epfindia.gov.in ವೆಬ್‌ಸೈಟ್‌ಗೆ ಭೇಟಿ ನೀಡಬ ಹುದು ಅಥವಾ ಹತ್ತಿರದ ಪ್ರಾದೇಶಿಕ ಕಚೇರಿಯನ್ನು ಸಂಪರ್ಕಿಸಬ ಹುದಾಗಿದೆ ಎಂದು ನೌಕರರ ಭವಿಷ್ಯ ನಿಧಿ ಸಂಸ್ಥೆಯ ರಾಯಚೂರಿನ ಪ್ರಾದೇಶಿಕ ಕಚೇರಿಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.15ಕ್ಕೆ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಕಾರ್ಯಕ್ರಮ



**ರಾಯಚೂರು,ನ.11–** ಕರ್ನಾಟಕದ ಉಚ್ಚ ನ್ಯಾಯಾಲಯದ ಘನವೆತ್ತ ಮುಖ್ಯ ನ್ಯಾಯಮೂರ್ತಿಗಳು ನವೆಂಬರ್ 15ರಂದು ರಾಯಚೂರು ಜಿಲ್ಲೆಯಲ್ಲಿ ಹಮ್ಮಿಕೊಂಡ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನವೆಂಬರ್ 10ರಂದು ಸಂಜೆ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಘನವೆತ್ತ ಮುಖ್ಯ ನ್ಯಾಯಮೂರ್ತಿಗಳು ನವಂಬರ್ 15ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ, ರಾಯಚೂರು ಜಿಲ್ಲೆಯ ದೇವದಾಸಿಯರ ಸ್ಥಿತಿ ಗತಿ ಹಾಗೂ ಪುನರ್ವಸತಿ ಕುರಿತು ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಕ್ರಮವು ಸಕಾಲಕ್ಕೆ, ಶಿಸ್ತಿನಿಂದ ಹಾಗೂ ಯಶಸ್ವಿಯಾಗಿ ನಡೆಯುವಂತೆ ರಾಯಚೂರು ಸಹಾಯಕ ಆಯುಕ್ತರ ಮೇಲುಸ್ತುವಾರಿಯಲ್ಲಿ ಸಂಬಂಧಪಟ್ಟದ ಇಲಾಖಾಧಿಕಾರಿಗಳು, ಇಲಾಖಾ ಸಿಬ್ಬಂದಿಯಿಂದ ರಚಿಸಿದ ಸಮಿತಿಗಳಿಗೆ ವಹಿಸಿದ ಎಲ್ಲ ಕಾರ್ಯಗಳನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಗಣ್ಯರ ಸ್ವಾಗತ, ಶಿಷ್ಟಾಚಾರ, ಆಮಂತ್ರಣ ಪತ್ರಿಕೆ, ಕಲಾ ತಂಡಗಳ ಇತ್ಯಾದಿ ವ್ಯವಸ್ಥೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳು, ಬಿಸಿಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು ತಹಸೀಲ್ದಾರರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಶಿಸ್ತಿನಿಂದ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ರಂಗಮಂದಿರದಲ್ಲಿ ವಿದ್ಯುತ್ ಸಂಪರ್ಕ ಹಾಗೂ ವೇದಿಕೆ ಅಲಂಕಾರದ ಬಗ್ಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು, ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರು ಮತ್ತು ಜೆಸ್ಕಾಂ ಅಧಿಕಾರಿಗಳು ಅಗತ್ಯ ಏರ್ಪಾಡು ಮಾಡಬೇಕು ಎಂದು ಸೂಚನೆ ನೀಡಿದರು.ಕಾರ್ಯಕ್ರಮದ ದಿನದಂದು ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತು ಸೂಕ್ತ ಭದ್ರತೆ ಒದಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ತಿಳಿಸಿದರು.ಸಾರ್ವಜನಿಕರು, ಗಣ್ಯರು, ಅಧಿಕಾರಿಗಳು, ಪತ್ರಕರ್ತರಿಗೆ ಕುಡಿಯುವ ನೀರು ಹಾಗೂ ಊಟೋಪಚಾರದ ವ್ಯವಸ್ಥೆ ಮಾಡಬೇಕು. ಅಗತ್ಯ ಪ್ರಚಾರ ಕಾರ್ಯಕೈಗೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಬಕಾರಿ ಇಲಾಖೆ, ಆಹಾರ ಇಲಾಖೆ, ಮಹಾನಗರ ಪಾಲಿಕೆ, ವಾರ್ತಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ತುರ್ತು ಚಿಕಿತ್ಸೆಗಾಗಿ ವೈದ್ಯಾಧಿಕಾರಿ ಮತ್ತು ನುರಿತ ಸಿಬ್ಬಂದಿಗಳೊಂದಿಗೆ ಸೂಕ್ತ ಅಂಬೂಲೆನ್ಸ್ ವ್ಯವಸ್ಥೆ ಮಾಡಬೇಕು. ಅಗ್ನಿಶಾಮಕ ಅಧಿಕಾರಿಗಳು, ಕಾರ್ಯಕ್ರಮದ ಸ್ಥಳದಲ್ಲಿ ಅಗ್ನಿ ಶಾಮಕವಾಹನದೊಂದಿಗೆ ನುರಿತ ಸಿಬ್ಬಂದಿಯ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು. ದೇವದಾಸಿ ಮಹಿಳೆಯರಿಗೆ ಸೂಕ್ತ ಸಾರಿಗೆ ವ್ಯವಸ್ಥೆಗೆ ಕ್ರಮ ವಹಿಸಲು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಶಾಲಾ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ವಿವಿಧ ಇಲಾಖೆಯ ಅಧಿಕಾರಿಗಳಾದ ನವೀನ್ ಕುಮಾರ್, ಡಾ.ಸುರೇಂದ್ರ ಬಾಬು, ನಸೀರ್ ಅಹಮದ್, ರಾಜೇಂದ್ರ ಜಲ್ದಾರ್, ಆಗ್ನಿ ಶಾಮಕದಳದ ರವೀಂದ್ರ ಸೇರಿದಂತೆ ವಿವಿಧ ಅಭಿವೃದ್ಧಿ ನಿಗಮಗಳ ಜಿಲ್ಲಾ ವ್ಯವಸ್ಥಾಪಕರು ಮತ್ತು ಮತ್ತೀತರರು ಇದ್ದರು.

## ಚಂದ್ರಶೇಖರ್‌ಗೆ ಪಿಹೆಚ್‌ಡಿ

**ಯುವ ಮಾರ್ಗ ಸುದ್ದಿ**



**ಲಿಂಗಸುಗೂರು,ನ.11–** ಪಟ್ಟಣದ ಶ್ರೀಮತಿ ಬಸ್ಸಮ್ಮ ಗುರುಲಿಂಗಪ್ಪ ಕಾನೂನು ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕ ಚಂದ್ರಶೇಖರ ಹುನಕುಂಟಿಯವರಿಗೆ ಪಿಹೆಚ್‌ಡಿ ಪ್ರಧಾನ ಮಾಡಲಾಗಿದೆ.

ರಾಜಸ್ಥಾನದ ಸನ್‌ರೈಸ್ ವಿಶ್ವವಿದ್ಯಾಲಯವು ಲೀಗಲ್ ಆಸ್ಪೆಕ್ಟ್ ಆಫ್ ಎಕ್ಸ್‌ಟ್ರಾ ಮರಿಟಲ್ ಆಸ್ಪೆಕ್ಟ್ ಆಫ್ ಡಿವೋರ್ಸ್ ಅಂಡರ್ ಹಿಂದೂ ಲಾ ವಿಷಯದ ಬಗ್ಗೆ ಡಾ.ಪ್ರಕಾಶ್ ರಾವ್ ಕೆ.ದೇಶಮುಖ್‌ರ ಮಾರ್ಗದರ್ಶನದಲ್ಲಿ ಚಂದ್ರಶೇಖರ ಅವರಿಗೆ ಪಿಹೆಚ್‌ಡಿ ಪ್ರಧಾನ ಮಾಡಲಾಗಿದೆ.

ಪಿಹೆಚ್ ಡಿ ಪಡೆದ ಚಂದ್ರಶೇಖರ್ ಅವರಿಗೆ ಮದಾವಿದ್ಯಾಲಯದ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಉಪನ್ಯಾಸಕರು ಹಾಗೂ ಸಿಬ್ಬಂಧಿ ವರ್ಗ ಅಭಿನಂದಿಸಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H